**ಸಂಪುಟ:** 06 **ಸಂಚಿಕೆ:** 144 **ಪುಟಗಳು:** 08 **ಗುರುವಾರ** 06 **ಆಗಸ್ಟ್** 2026

www.udayavahini.in epaper.udayavahini.in Udaya vahini news Udaya vahini news Udayavahini news youtube udayavahininews@gmail.com

ಸಂಪಾದಕರು: ಟಿ. ಹೊಂಬೇಗೌಡ RNI No. KARKAN/2021/80833 9448225696 +91 8035841833 ₹5

# ಉದಯ ವಾಹಿನಿ

ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ

**ಮುಂಜಾನೆ ಮಾತು**

ಸುಲಭದಲ್ಲಿ ಸುಖ ದಯಪಾಲಿಸು ಎಂದು ಬೇಡಿಕೊಳ್ಳುವುದಕ್ಕಿಂತ, ಕಠಿಣ ಪರಿಸ್ಥಿತಿಗಳನ್ನು ಎದುರಿಸುವ ಶಕ್ತಿ ಕೊಡು ಎಂದು ಪ್ರಾರ್ಥಿಸೋಣ!

## ಕೆಪಿಎಸ್‌ಸಿ ಮಾಜಿ ಅಧ್ಯಕ್ಷ ಶಿವಶಂಕರಪ್ಪ ಸಾಹುಕಾರ್ ಸೇರಿ 29 ಮಂದಿಗೆ ಶೀಘ್ರವೇ ಸಿಐಡಿ ನೋಟಿಸ್

• ಉದಯವಾಹಿನಿ, ಬೆಂಗಳೂರು

ಪಶುವೈದ್ಯಾಧಿಕಾರಿ ನೇಮಕಾತಿ ಪ್ರಕರಣಕ್ಕೆ ಸಂಬಂಧಿಸಿದಂತೆ ದೂರುದಾರರ ವಿಚಾರಣೆ ಪೂರ್ಣಗೊಂಡಿದ್ದು, ಕೆಪಿಎಸ್‌ಸಿ ಮಾಜಿ ಅಧ್ಯಕ್ಷ ಶಿವಶಂಕರಪ್ಪ ಸಾಹುಕಾರ್ ಸೇರಿದಂತೆ ಅಕ್ರಮವಾಗಿ ಆಯ್ಕೆಯಾಗಿದ್ದಾರೆ ಎನ್ನಲಾದ 29 ಮಂದಿ ಅಭ್ಯರ್ಥಿಗಳಿಗೆ ಶೀಘ್ರವೇ ನೋಟಿಸ್ ಜಾರಿಗೊಳಿಸಲು ಸಿಐಡಿ ಅಧಿಕಾರಿಗಳು ಸಜ್ಜಾಗಿದ್ದಾರೆ. ಹಾಸನ ಮೂಲದ ದೂರುದಾರ ಮಂಜುನಾಥ್ ಅವರನ್ನು ಸಿಐಡಿ ಕಚೇರಿಯಲ್ಲಿ ವಿಚಾರಣೆ ನಡೆಸಿದ ತನಿಖಾಧಿಕಾರಿಗಳು ಅವರ ಹೇಳಿಕೆ ದಾಖಲಿಸಿಕೊಂಡಿದ್ದಾರೆ. ಈ ವೇಳೆ ಮಂಜುನಾಥ್ ಅವರು ಮಧ್ಯವರ್ತಿಗಳು ಹಾಗೂ ಅಭ್ಯರ್ಥಿಗಳ ನಡುವಿನ ಧ್ವನಿಮುದ್ರಿಕೆ ಸೇರಿದಂತೆ ಹಲವು ಪ್ರಮುಖ ದಾಖಲೆಗಳನ್ನು ತನಿಖಾ ತಂಡಕ್ಕೆ ಒದಗಿಸಿದ್ದಾರೆ.

ಪಶುವೈದ್ಯಾಧಿಕಾರಿ ಹುದ್ದೆ ಪಡೆದಿರುವ 29 ಮಂದಿ ಅಭ್ಯರ್ಥಿಗಳ ಪೈಕಿ ಹಲವರ ಮೇಲೆ ಗಂಭೀರ ಅನುಮಾನಗಳಿವೆ. ಪರೀಕ್ಷೆ ನಡೆಯುವ ಹಿಂದಿನ ದಿನ ಈ ಅಭ್ಯರ್ಥಿಗಳು ತಮ ಮೊಬೈಲ್ ಫೋನ್‌ಗಳನ್ನು ಸ್ವಿಚ್ ಆಫ್ ಮಾಡಿಕೊಂಡಿರುವುದು ತನಿಖೆಯಿಂದ ಬೆಳಕಿಗೆ ಬಂದಿದೆ. ಹೀಗಾಗಿ, ಆ ನಿರ್ಣಾಯಕ ದಿನದಂದು ಇವರು ಎಲ್ಲಿದ್ದರು ಯಾರನ್ನು ಭೇಟಿಯಾಗಿದ್ದರು ಎಂಬ ಬಗ್ಗೆ ಸಿಐಡಿ ಮಾಹಿತಿ ಕಲೆಹಾಕಿದೆ.

**ಮಾಜಿ ಅಧ್ಯಕ್ಷರಿಗೆ ಕುತ್ತು:** ಕೆಪಿಎಸ್‌ಸಿ ಕಚೇರಿ ಮೇಲೆ ನಡೆಸಲಾದ ದಾಳಿಯ ವೇಳೆ ವಶಪಡಿಸಿಕೊಳ್ಳಲಾದ ಒಎಂಆರ್ ಶೀಟ್‌ಗಳ ಪರಿಶೀಲನೆ ಈಗ ಅಂತಿಮ ಹಂತದಲ್ಲಿದೆ. ಈ ವರದಿ ಹಾಗೂ ಸಾಕ್ಷ್ಯಾಧಾರಗಳ ಆಧಾರದ ಮೇಲೆ ಮುಂದಿನ ಎರಡುಮೂರು ದಿನಗಳಲ್ಲಿ ಕೆಪಿಎಸ್‌ಸಿ ಮಾಜಿ ಅಧ್ಯಕ್ಷ ಶಿವಶಂಕರಪ್ಪ ಸಾಹುಕಾರ್ ಅವರಿಗೆ ನೋಟಿಸ್ ನೀಡಿ ವಿಚಾರಣೆಗೆ ಕರೆಯಲು ನಿರ್ಧರಿಸಲಾಗಿದೆ.

**ಪ್ರಕರಣದ ಹಿನ್ನೆಲೆ:** ಹಾಸನ ಜಿಲ್ಲೆಯ ಚನ್ನರಾಯಪಟ್ಟಣ ತಾಲ್ಲೂಕಿನ ಮಂಜುನಾಥ್ ಅವರು, ಪಶುವೈದ್ಯಾಧಿಕಾರಿ ಹುದ್ದೆ ಪಡೆದಿರುವ'ಶುವೈದ್ಯಾಧಿಕಾರಿ ಹುದ್ದೆಗಳ ನೇಮಕಾತಿಯಲ್ಲಿ ದೊಡ್ಡ ಮಟ್ಟದ ಅವ್ಯವಹಾರ ಹಾಗೂ ಭ್ರಷ್ಟಾಚಾರ ನಡೆದಿದೆ ಎಂದು ಆರೋಪಿಸಿದ್ದರು.

ಈ ಸಂಬಂಧ ಕೆಪಿಎಸ್‌ಸಿ ಅಧ್ಯಕ್ಷರು, ಸದಸ್ಯರು ಹಾಗೂ ಅಕ್ರಮವಾಗಿ ಹುದ್ದೆ ಗಿಟ್ಟಿಸಿಕೊಂಡಿರುವ 29 ಅಭ್ಯರ್ಥಿಗಳ ವಿರುದ್ಧ ಕ್ರಮ ಕೈಗೊಳ್ಳುವಂತೆ ವಿಧಾನಸೌಧ ಪೊಲೀಸ್ ಠಾಣೆಗೆ ದೂರು ನೀಡಿದ್ದರು.

## ರಾಜ್ಯದಲ್ಲಿ 1.11 ಕೋಟಿ ಜನರು ಮತದಾರರ ಪಟ್ಟಿಯಿಂದ ಔಟ್?

• ಉದಯವಾಹಿನಿ, ಬೆಂಗಳೂರು

ರಾಜ್ಯದಲ್ಲಿ ವಿಶೇಷ ತೀವ್ರ ಮತದಾರರ ಪಟ್ಟಿ ಪರಿಷ್ಕರಣೆ ಪ್ರಕ್ರಿಯೆ ಮುಕ್ತಾಯ ಹಂತ ತಲುಪಿದ್ದು 1.11 ಕೋಟಿ ಜನರ ಹೆಸರು ಮತದಾರರ ಪಟ್ಟಿಯಿಂದ ಕೈ ಬಿಡುವ ಸಾಧ್ಯತೆಯಿದೆ. ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ರಾಜ್ಯ ಮುಖ್ಯ ಚುನಾವಣಾಧಿಕಾರಿ ವಿ. ಅನ್ಬುಕುಮಾರ್, ಶೇ. 80ರಷ್ಟು ಎನ್ಯುಮರೇಷನ್ ಫಾರ್ಮ್‌ಗಳ ಡಿಜಿಟಲೀಕರಣ ಪೂರ್ಣಗೊಂಡಿದೆ. ರಾಜ್ಯದಲ್ಲಿ 1.11 ಕೋಟಿ ಮತದಾರರು ಪಟ್ಟಿಗೆ ಸೇರ್ಪಡೆಯಾಗಿದ್ದಾರೆ. ಹೆಸರು ಕೈಬಿಡದಿರಲು ಮತದಾರರು ಫಾರ್ಮ್-6 ಸಲ್ಲಿಸಬೇಕೆಂದು ಮನವಿ ಮಾಡಿದ್ದಾರೆ. ರಾಜ್ಯದಲ್ಲಿ 5.54 ಕೋಟಿ ಮತದಾರರಿದ್ದು ಈ ಪೈಕಿ 4.43 ಕೋಟಿ ಜನರು ಗಣತಿ ನಮೂನೆ ಭರ್ತಿ ಮಾಡಿದ್ದಾರೆ. ಬೆಂಗಳೂರು ನಗರ ವ್ಯಾಪ್ತಿಯಲ್ಲಿ ಶೇಕಡಾವಾರು ಅತಿ ಹೆಚ್ಚು ಮತದಾರರು ಪಟ್ಟಿಗೆ ಸೇರ್ಪಡೆಯಾಗಿದ್ದಾರೆ ಎಂದು ತಿಳಿಸಿದರು. ಆಗಸ್ಟ್ 8 ರಂದು ಎಸ್‌ಐಆರ್ ಗಣತಿ ಪ್ರಕ್ರಿಯೆಯ ಒಂದು ಹಂತ ಮುಕ್ತಾಯಗೊಳ್ಳಲಿದೆ. ಗಣತಿ ನಮೂನೆ ಸಿಗದೇ ಇದ್ದವರು ಅಥವಾ ಸ್ಥಳಾಂತರಗೊಂಡ 80 ಲಕ್ಷಕ್ಕೂ ಹೆಚ್ಚು ಮತದಾರರು ಹೆದರುವ ಅಗತ್ಯವಿಲ್ಲ.

## ಬೆಂಗಳೂರು ಜೋಗ್ ಫಾಲ್ಸ್: ವಿಶೇಷ ಪ್ಯಾಕೇಜ್ ಪ್ರವಾಸ ಘೋಷಿಸಿದ ಕೆಎಸ್‌ಆರ್‌ಟಿಸಿ

• ಉದಯವಾಹಿನಿ, ಬೆಂಗಳೂರು

ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮ (ಕೆಎಸ್‌ಆರ್‌ಟಿಸಿ) ಬೆಂಗಳೂರು ಕೇಂದ್ರ ವಿಭಾಗವು ಪ್ರವಾಸಿಗರಿಗಾಗಿ ಹೊಸದಾಗಿ ಬೆಂಗಳೂರು ಟು ಜೋಗ್ ಫಾಲ್ಸ್ ವಿಶೇಷ ಪ್ಯಾಕೇಜ್ ಪ್ರವಾಸವನ್ನು ಪರಿಚಯಿಸಿದೆ. ಈ ಪ್ಯಾಕೇಜ್ ಪ್ರವಾಸವು ಶಿವಮೊಗ್ಗ, ಸಾಗರ ಮಾರ್ಗವಾಗಿ ಜೋಗ್ ಜಲಪಾತಕ್ಕೆ ಸಂಚರಿಸಲಿದ್ದು, ನಾನ್ ಎ/ಸಿ ಸ್ಲೀಪರ್ ವಾಹನದಲ್ಲಿ ಪ್ರಯಾಣದ ವ್‌ಯವಸ್ಥೆ ಕಲ್ಪಿಸಲಾಗಿದೆ.

ಪ್ರಯಾಣಿಕರಿಗೆ ವಾಹನದಲ್ಲೇ ಶುಕ್ರವಾರ ರಾತ್ರಿ ಪ್ರಯಾಣ ಆರಂಭವಾಗಲಿದ್ದು, ಉಪಾಹಾರ, ಮಧ್ಯಾಹ್ನದ ಊಟ ಹಾಗೂ ರಾತ್ರಿ ಭೋಜನದ ವ್ಯವಸ್ಥೆಯೂ ಪ್ಯಾಕೇಜ್‌ನಲ್ಲಿ ಒಳಗೊಂಡಿದೆ.

ಈ ಪ್ರವಾಸವು ಆ.8 ರಿಂದ ಆರಂಭವಾಗಲಿದೆ. ಪ್ರವಾಸದ ವೇಳಾಪಟ್ಟಿಯ ಪ್ರಕಾರ, ರಾತ್ರಿ 10.30ಕ್ಕೆ ಬೆಂಗಳೂರಿನಿಂದ ಹೊರಡುವ ವಾಹನ ಬೆಳಿಗ್ಗೆ 5.30ಕ್ಕೆ ಸಾಗರ ತಲುಪಲಿದೆ.

## ಬೆಂಗಳೂರು-ಮಂಗಳೂರು ವಂದೇಭಾರತ್ I ಸಕಲೇಶಪುರ ಘಾಟ್ ಮಾರ್ಗದಲ್ಲಿ ಆ.11ರಿಂದ ಪ್ರಾಯೋಗಿಕ ಸಂಚಾರ

• ಉದಯವಾಹಿನಿ, ಬೆಂಗಳೂರು

ಕರಾವಳಿಯ ರೈಲು ಪ್ರಯಾಣಿಕರಿಗೆ ಸಿಹಿ ಸುದ್ದಿ. ನೈಋತ್ಯ ರೈಲ್ವೆಯ ಮೈಸೂರು ವಿಭಾಗವು ಆಗಸ್ಟ್ 11 ರಿಂದ ಬೆಂಗಳೂರು-ಮಂಗಳೂರು ವಂದೇ ಭಾರತ್ ಎಕ್ಸ್‌ಪ್ರೆಸ್ ರೈಲಿನ ಪ್ರಾಯೋಗಿಕ ಸಂಚಾರವನ್ನು ನಡೆಸಲು ಸಿದ್ಧತೆ ಮಾಡಿಕೊಂಡಿದೆ. ರೈಲ್ವೆ ರಾಜ್ಯ ಸಚಿವ ವಿ. ಸೋಮಣ್ಣ(ಅವರು ಜೂನ್ ತಿಂಗಳೊಳಗಾಗಿ ಈ ಮಾರ್ಗದಲ್ಲಿ ವಂದೇ ಭಾರತ್ ರೈಲು ಸೇವೆಯನ್ನು ಆರಂಭಿಸುವುದಾಗಿ ಈ ಹಿಂದೆ ತಿಳಿಸಿದ್ದರು.


ಆದರೆ ಸಕಲೇಶಪುರ-ಸುಬ್ರಹ್ಮಣ್ಯ ಮಾರ್ಗದ ಕ್ಲಿಷ್ಟಕರ ಘಾಟ್ ಪ್ರದೇಶದಲ್ಲಿ ಸಂಚರಿಸಲು ಅತ್ಯಗತ್ಯವಾದ ಆಟೋಮ್ಯಾಟಿಕ್ ಎಮರ್ಜೆನ್ಸಿ ಬ್ರೇಕಿಂಗ್ ವ್ಯವಸ್ಥೆ ಹೊಂದಿರುವ ರೇಕ್ ಲಭ್ಯವಿಲ್ಲದ ಕಾರಣ ಪ್ರಕ್ರಿಯೆ ತಡವಾಗಿತ್ತು. ಚೆನ್ನೈನ ಇಂಟೆಗ್ರಲ್ ಕೋಚ್ ಫ್ಯಾಕ್ಟರಿಯಿಂದ ತಂತ್ರಜ್ಞಾನ ಹೊಂದಿರುವ 20 ಕೋಚ್‌ಗಳ ವಂದೇ ಭಾರತ್ ರೇಕ್ ಮೈಸೂರು ವಿಭಾಗಕ್ಕೆ ತಲುಪಿದೆ.

ಪ್ರಸ್ತುತ ಈ ರೈಲನ್ನು ಮಂಡ್ಯ ಜಿಲ್ಲೆಯ ಪಾಂಡವಪುರ ರೈಲು ನಿಲ್ದಾಣದಲ್ಲಿ ನಿಲ್ಲಿಸಲಾಗಿದೆ. ಆಗಸ್ಟ್ 11ರಿಂದ ಆರಂಭವಾಗಲಿರುವ ಪ್ರಾಯೋಗಿಕ ಸಂಚಾರವು ಆಗಸ್ಟ್ 20ರವರೆಗೆ ನಡೆಯಲಿದೆ. ಭಾರತೀಯ ರೈಲ್ವೆಯ ಸಂಶೋಧನೆ, ವಿನ್ಯಾಸ ಮತ್ತು ಮಾನಕ ಸಂಸ್ಥೆಯ ತಂಡವು ಶೀಘ್ರದಲ್ಲೇ ಆಗಮಿಸಿ ಈ ಪರೀಕ್ಷಾರ್ಥ ಸಂಚಾರದ ಉಸ್ತುವಾರಿ ವಹಿಸಲಿದೆ ಎಂದು ಮೈಸೂರು ವಿಭಾಗೀಯ ರೈಲ್ವೆ ವ್ಯವಸ್ಥಾಪಕ ಮುದಿತ್ ಮಿತ್ತಲ್ ತಿಳಿಸಿದ್ದಾರೆ.

---

ಇತ್ತೀಚಿನ ನೀತಿ ಉಪಕ್ರಮಗಳಲ್ಲಿ ರಾಷ್ಟ್ರೀಯ ನಿರ್ಣಾಯಕ ಖನಿಜ ಅಭಿಯಾನದ ಖನಿಜ್ ವಿದೇಶ್ ಇಂಡಿಯಾ ಲಿಮಿಟೆಡ್ ನಂತಹ ಸಾರ್ವಜನಿಕ ವಲಯದ ಕಂಪನಿಗಳ ಮೂಲಕ ವಿದೇಶಗಳಲ್ಲಿ ಗಣಿಗಾರಿಕೆ ಆಸ್ತಿಗಳ ಸ್ವಾಧೀನ, ಹೆಚ್ಚಿದ ಭೂವೈಜ್ಞಾನಿಕ ಪರಿಶೋಧನೆ, ಖಾಸಗಿ ವಲಯದ ಭಾಗವಹಿಸುವಿಕೆಯನ್ನು ಉತ್ತೇಜಿಸುವ ಸುಧಾರಣೆಗಳು ಹಾಗೂ ಭಾರತ ಅಮೆರಿಕ, ಭಾರತ-ಆಸ್ಟ್ರೇಲಿಯಾ, ಭಾರತ-ಯುರೋಪಿಯನ್ ಒಕ್ಕೂಟ ಮತ್ತು ಕ್ವಾಡ್ ಚೌಕಟ್ಟುಗಳ ಅಡಿಯಲ್ಲಿನ ಅಂತಾರಾಷ್ಟ್ರೀಯ ಸಹಭಾಗಿತ್ವಗಳು ಸೇರಿವೆ. ಉಜ್ಬೇಕಿಸ್ತಾನ್‌ನೊಂದಿಗಿನ ಸಹಕಾರವು ಕಾರ್ಯತಂತ್ರದ ಖನಿಜಗಳ ಮತ್ತೊಂದು ವಿಶ್ವಾಸಾರ್ಹ ಮೂಲವನ್ನು ಒದಗಿಸುವ ಮೂಲಕ ಈ ಪ್ರಯತ್ನಗಳಿಗೆ ಪೂರಕವಾಗಿದೆ. ಉಜ್ಬೇಕಿಸ್ತಾನ್ ಮಧ್ಯ ಏಷ್ಯಾದಲ್ಲಿ ಕೇಂದ್ರ ಸ್ಥಾನವನ್ನು ಹೊಂದಿದೆ. ಇದು ಭೂ - ಆವೃತ ರಾಷ್ಟ್ರವಾಗಿದ್ದರೂ, ಕಜಕಿಸ್ತಾನ್, ಕಿರ್ಗಿಸ್ತಾನ್, ತಜಿಕಿಸ್ತಾನ್, ಅಫ್ಘಾನಿಸ್ತಾನ್ ಮತ್ತು ತುರ್ಕಮೆನಿಸ್ತಾನ್‌ಗಳೊಂದಿಗೆ ಗಡಿ ಹಂಚಿಕೊಂಡಿದೆ. ಇದು ಈ ವಿಶಾಲ ಪ್ರದೇಶಕ್ಕೆ ಪ್ರಮುಖ ಪ್ರವೇಶದ್ವಾರವಾಗಿ ಕಾರ್ಯನಿರ್ವಹಿಸುತ್ತದೆ.ಭಾರತಕ್ಕೆ, ಉಜ್ಬೇಕಿಸ್ತಾನ್‌ನೊಂದಿಗಿನ ಸಂಬಂಧಗಳು ಮಧ್ಯ ಏಷ್ಯಾ ಸಂಪರ್ಕ ನೀತಿಯ ಅಡಿಯಲ್ಲಿನ ವಿಶಾಲ ಉದ್ದೇಶಗಳಿಗೆ ಬೆಂಬಲ ನೀಡುತ್ತವೆ. ಈ ನೀತಿಯು ಐದು ಮಧ್ಯ ಏಷ್ಯಾದ ಗಣರಾಜ್ಯಗಳೊಂದಿಗೆ ರಾಜಕೀಯ, ಆರ್ಥಿಕ ಮತ್ತು ಭದ್ರತಾ ಸಂಬಂಧಗಳನ್ನು ಬಲಪಡಿಸುವ ಗುರಿಯನ್ನು ಹೊಂದಿದೆ. ಅಂತಾರಾಷ್ಟ್ರೀಯ ಉತ್ತರ ದಕ್ಷಿಣ ಸಾರಿಗೆ ಕಾರಿಡಾರ್ ಮತ್ತು ಚಾಬಹಾರ್ ಬಂದರು ಯೋಜನೆಯ ಮೂಲಕ ಸುಧಾರಿತ ಸಂಪರ್ಕವು ಅಂತಿಮವಾಗಿ ಮಧ್ಯ ಏಷ್ಯಾದಿಂದ ಭಾರತಕ್ಕೆ ಖನಿಜಗಳ ಸಾಗಣೆಯನ್ನು ಸುಗಮಗೊಳಿಸುತ್ತದೆ ಮತ್ತು ಸಾಂಪ್ರದಾಯಿಕ ಸಮುದ್ರ ಮಾರ್ಗಗಳ ಮೇಲಿನ ಅವಲಂಬನೆಯನ್ನು ಕಡಿಮೆ ಮಾಡುತ್ತದೆ.

# ಭಾರತ ಹೊಸ ಹೆಜ್ಜೆ



• ಉದಯವಾಹಿನಿ, ನವದೆಹಲಿ

ಉಜ್ಬೇಕಿಸ್ತಾನದ ಜೊತೆಗೆ ನಿರ್ಣಾಯಕ ಖನಿಜಗಳು ಮತ್ತು ಅಪರೂಪದ ಭೂ ಖನಿಜಗಳ ಸಹಕಾರವನ್ನು ವಿಸ್ತರಿಸಲು ಭಾರತ ನಿರ್ಧರಿಸಿದೆ. ಇದು ದೇಶದ ಸ್ವಚ್ಛ ಇಂಧನ ಪರಿವರ್ತನೆ, ರಕ್ಷಣಾ ವಲಯದ ಆಧುನೀಕರಣ ಮತ್ತು ಉನ್ನತ ತಂತ್ರಜ್ಞಾನದ ಆಕಾಂಕ್ಷೆಗಳಿಗೆ ಅತ್ಯಗತ್ಯವಾದ ಸಂಪನ್ಮೂಲಗಳಿಗಾಗಿ ಸುಭದ್ರ ಪೂರೈಕೆ ಸರಪಳಿಗಳನ್ನು ಖಾತ್ರಿಪಡಿಸಿಕೊಳ್ಳುವ ನವದೆಹಲಿಯ ಕಾರ್ಯತಂತ್ರದಲ್ಲಿ ಒಂದು ಪ್ರಮುಖ ಹೆಜ್ಜೆಯಾಗಿದೆ.

**1** ಭಾರತ ಮತ್ತು ಮಧ್ಯ ಏಷ್ಯಾದ ನಡುವಿನ ಸಂಬಂಧಗಳು ತಮ್ಮ ಪೂರ್ಣ ಸಾಮರ್ಥ್ಯ

**2** ಉಜ್ಬೇಕಿಸ್ತಾನ್‌ನಲ್ಲಿರುವ ಅಪರೂಪದ ಭೂಮಿಯ ಖನಿಜಗಳ ಮತ್ತು ನಿರ್ಣಾಯಕ

**3** ದ್ವಿಪಕ್ಷೀಯ ಕಾರ್ಯಸೂಚಿಯಲ್ಲಿ ಗಣಿಗಾರಿಕೆ ಮತ್ತು ವಿರಳ ಮೃತ್ತಿಕೆಗಳ ವಿಷಯಗಳನ್ನು ಸೇರ್ಪಡೆ

ಮಹತ್ವದ ಖನಿಜಗಳಿಗಾಗಿ ಜಾಗತಿಕ ಪೈಪೋಟಿ ತೀವ್ರಗೊಳ್ಳುತ್ತಿರುವ ಮತ್ತು ಚೀನಾದ ಮೇಲಿನ ಅವಲಂಬನೆಯು ಪ್ರಮುಖ ಕಾಳಜಿ ವಿಷಯ ಆಗಿರುವುದರಿಂದ ಈ ಕಾರ್ಯತಂತ್ರ ಪ್ರಮುಖವಾಗಿದೆ. ಖನಿಜ ಸಂಪದ್ಭರಿತ ಉಜ್ಬೇಕಿಸ್ತಾನ್, ಮಧ್ಯ ಏಷ್ಯಾದೊಂದಿಗಿನ ಭಾರತದ ಬಾಂಧವ್ಯದಲ್ಲಿ ಅತ್ಯಂತ ಮಹತ್ವದ ಪಾಲುದಾರನಾಗಿ ಹೊರಹೊಮ್ಮುತ್ತಿದೆ.

ದೂರದರ್ಶನದ ಆನ್‌ಲೈನ್ ವರದಿಯ ಪ್ರಕಾರ,ವಿದೇಶಾಂಗ ವ್ಯವಹಾರಗಳ ಸಚಿವ ಎಸ್. ಜೈಶಂಕರ್ ಮತ್ತು ಉಜ್ಬೇಕಿಸ್ತಾನದ ವಿದೇಶಾಂಗ ಸಚಿವ ಬಖ್ತಿಯೋರ್ ಸೈದೋವ್ ನಡುವೆ ನಡೆದ ಸಭೆಯಲ್ಲಿ, ಭಾರತ ಮತ್ತು ಉಜ್ಬೇಕಿಸ್ತಾನವು ಪ್ರಮುಖ ಖನಿಜಗಳು, ಗಣಿಗಾರಿಕೆ, ವ್ಯಾಪಾರ, ಇಂಧನ, ಮೂಲಸೌಕರ್ಯ, ರಕ್ಷಣೆ ಮತ್ತು ಶಿಕ್ಷಣ ಕ್ಷೇತ್ರಗಳಲ್ಲಿ ಸಹಕಾರವನ್ನು ಬಲಪಡಿಸುವ ಮೂಲಕ ತಮ್ಮ ಕಾರ್ಯತಂತ್ರದ ಪಾಲುದಾರಿಕೆ ವಿಸ್ತರಿಸಲು ಒಪ್ಪಿಕೊಂಡಿವೆ.

ಸಚಿವರು, ಉಭಯ ದೇಶಗಳು ಗಣಿಗಾರಿಕೆ ವಲಯದಲ್ಲಿ ಅದರಲ್ಲೂ ವಿಶೇಷವಾಗಿ ನಿರ್ಣಾಯಕ ಖನಿಜಗಳು ಮತ್ತು ಅಪರೂಪದ ಭೂ ಸಂಪನ್ಮೂಲಗಳ ವಿಷಯದಲ್ಲಿ ಸಹಕಾರವನ್ನು ವಿಸ್ತರಿಸಲು ಎದುರು ನೋಡುತ್ತಿವೆ ಎಂದಿದ್ದಾರೆ. ಭೌಗೋಳಿಕ ರಾಜಕೀಯ ಸ್ಥಾನ ಮತ್ತು ಇಂಧನ ಸಂಪನ್ಮೂಲಗಳ ಭಾರತವು ಸಾಂಪ್ರದಾಯಿಕವಾಗಿ ಉಜ್ಬೇಕಿಸ್ತಾನವನ್ನು ಮಧ್ಯ ಏಷ್ಯಾದಲ್ಲಿ ಪ್ರಮುಖ ಪಾಲುದಾರನನ್ನಾಗಿ ಪರಿಗಣಿಸುತ್ತಾ ಬಂದಿದೆ.

ವಿಂಡ್ ಟರ್ಬೈನ್‌ಗಳು, ಸ್ಮಾರ್ಟ್‌ಫೋನ್‌ಗಳು ಮತ್ತು ಅರೆವಾಹಕಗಳು, ಕ್ಷಿಪಣಿ ಮಾರ್ಗದರ್ಶನ ವ್ಯವಸ್ಥೆಗಳು, ರಾಡಾರ್ ಮತ್ತು ಎಲೆಕ್ಟ್ರಾನಿಕ್ ಯುದ್ಧ ಉಪಕರಣಗಳು, ಉಪಗ್ರಹಗಳು ಮತ್ತು ಬಾಹ್ಯಾಕಾಶ ತಂತ್ರಜ್ಞಾನಗಳು, ಶಾಶ್ವತ ಆಯಸ್ಕಾಂತಗಳು ಮತ್ತು ವೈದ್ಯಕೀಯ ಉಪಕರಣಗಳ ತಯಾರಿಕೆಯಲ್ಲಿ ಬಳಸಲಾಗುವ 17 ಲೋಹೀಯ ಅಂಶಗಳ ಗುಂಪನ್ನು ಒಳಗೊಂಡಿವೆ.



### ಅಪರೂಪ ಖನಿಜದ ಶುದ್ಧೀಕರಣದ ಸವಾಲು

ವಿರಳ ಎಂದು ಕರೆಯಲಾಗಿದ್ದರೂ, ಈ ಖನಿಜಗಳು ಭೂಮಿಯ ಹೊರಪದರದಲ್ಲಿ ಇವು ತುಲನಾತ್ಮಕವಾಗಿ ಹೇರಳವಾಗಿವೆ. ಇವುಗಳ ಹೊರತೆಗೆಯುವಿಕೆ, ಸಂಸ್ಕರಣೆ ಮತ್ತು ಶುದ್ಧೀಕರಣವನ್ನು ಆರ್ಥಿಕವಾಗಿ ಲಾಭದಾಯಕವಾಗಿಸುವಲ್ಲಿ ಸವಾಲು ಅಡಗಿದೆ. ಕಾರಣ ಇದಕ್ಕೆ ಅತ್ಯಾಧುನಿಕ ತಂತ್ರಜ್ಞಾನ ಮತ್ತು ಭಾರಿ ಬಂಡವಾಳದ ಅಗತ್ಯ ಇರುತ್ತದೆ. ಜಾಗತಿಕ ಅಪರೂಪದ ಭೂ ಖನಿಜ ಉದ್ಯಮದಲ್ಲಿ ಇಂದು ಚೀನಾ ತನ್ನ ಪ್ರಾಬಲ್ಯವನ್ನು ಹೊಂದಿದೆ. ಇದು ಜಾಗತಿಕ ಗಣಿಗಾರಿಕೆಯ ಸುಮಾರು 60-70 ರಷ್ಟು ಪಾಲನ್ನು ಹಾಗೂ ಸಂಸ್ಕರಣಾ ಸಾಮರ್ಥ್ಯದ ಇನ್ನೂ ಹೆಚ್ಚಿನ ಪಾಲನ್ನು ತನ್ನದಾಗಿಸಿಕೊಂಡಿದೆ.

ಈ ಪ್ರಾಬಲ್ಯವು ಭಾರತ, ಅಮೆರಿಕ, ಜಪಾನ್, ಆಸ್ಟ್ರೇಲಿಯಾ ಮತ್ತು ಯುರೋಪಿಯನ್ ಒಕ್ಕೂಟದ ಸದಸ್ಯ ರಾಷ್ಟ್ರಗಳನ್ನು ತಮ್ಮ ಪೂರೈಕೆ ಮೂಲಗಳಲ್ಲಿ ವೈವಿಧ್ಯತೆಯತ್ತ ಗಮನಹರಿಸುವಂತೆ ಪ್ರೇರೇಪಿಸಿದೆ.

### ಭಾರತದ ನಿಕ್ಷೇಪ

ಭಾರತವು ದೇಶೀಯ ಅಪರೂಪದ ಭೂಮಿಯ ನಿಕ್ಷೇಪಗಳನ್ನು ಹೊಂದಿದ್ದರೂ ಅವು ಒಡಿಶಾ, ಆಂಧ್ರಪ್ರದೇಶ, ತಮಿಳುನಾಡು ಮತ್ತು ಕೇರಳದ ಕರಾವಳಿ ಮರಳಿನಲ್ಲಿದೆ. ಚೀನಾಕ್ಕೆ ಹೋಲಿಸಿದರೆ ದೇಶವು ತುಲನಾತ್ಮಕವಾಗಿ ಕಡಿಮೆ ಸಂಸ್ಕರಣಾ ಸಾಮರ್ಥ್ಯವನ್ನು ಹೊಂದಿದೆ.

ಹಲವಾರು ಕಾರ್ಯತಂತ್ರದ ಖನಿಜಗಳ ಮೇಲಿನ ಇತ್ತೀಚಿನ ಚೀನಾದ ರಫ್ತು ನಿರ್ಬಂಧಗಳು ಪೂರೈಕೆ - ಸರಪಳಿ ದುರ್ಬಲತೆಗಳ ಬಗ್ಗೆ ನವದೆಹಲಿಯಲ್ಲಿ ಕಳವಳವನ್ನು ಬಲಪಡಿಸಿವೆ. ಈ ಪರಿಣಾಮ, ಭಾರತವು ದೇಶೀಯ ಅನ್ವೇಷಣೆಯನ್ನು ವಿಸ್ತರಿಸಿಕೊಳ್ಳುತ್ತಿದೆ.

ವಿದೇಶಿ ಖನಿಜ ಸಂಪನ್ಮೂಲಗಳಲ್ಲಿ ಹೂಡಿಕೆ ಮಾಡುವುದು, ದೀರ್ಘಕಾಲೀನ ಪೂರೈಕೆ ಒಪ್ಪಂದಗಳನ್ನು ಮಾಡಿಕೊಳ್ಳುವುದು, ಸಂಸ್ಕರಣಾ ಸಾಮರ್ಥ್ಯಗಳನ್ನು ಅಭಿವೃದ್ಧಿಪಡಿಸುವುದು ಮತ್ತು ವಿಶ್ವಾಸಾರ್ಹ ದೇಶಗಳೊಂದಿಗೆ ಪಾಲುದಾರಿಕೆ ಹೊಂದುವುದನ್ನು ಒಳಗೊಂಡ ಬಹುಮುಖಿ ಕಾರ್ಯತಂತ್ರವನ್ನು ಅಳವಡಿಸಿಕೊಂಡಿದೆ. ಉಜ್ಬೇಕಿಸ್ತಾನ್ ಈ ವೈವಿಧ್ಯೀಕರಣದ ಕಾರ್ಯತಂತ್ರಕ್ಕೆ ಸೂಕ್ತವಾಗಿ ಹೊಂದಿಕೊಳ್ಳುತ್ತದೆ. ಆರ್ಥಿಕ ಭದ್ರತೆ ಮತ್ತು ಕಾರ್ಯತಂತ್ರದ ಕೈಗಾರಿಕೆಗಳಿಗೆ ಅತ್ಯಗತ್ಯವಾದ 30ಕ್ಕೂ ಹೆಚ್ಚು ಖನಿಜಗಳನ್ನು ಭಾರತ ಗುರುತಿಸಿದೆ.

### ರಕ್ಷಣೆ ಮತ್ತು ಶಿಕ್ಷಣ ಕ್ಷೇತ್ರಗಳಲ್ಲಿ ಸಹಕಾರ

### ಭಾರತ - ಉಜ್ಬೇಕಿಸ್ತಾನ ಸಹಕಾರ

ಉಜ್ಬೇಕಿಸ್ತಾನವು ಸೆಂಟ್ರಲ್ ಏಷ್ಯಾದಲ್ಲಿ ಅತ್ಯಂತ ಭರವಸಾದಾಯಕವಾದ ನಿರ್ಣಾಯಕ ಖನಿಜಗಳ ನಿಕ್ಷೇಪಗಳಲ್ಲಿ ಒಂದನ್ನು ಹೊಂದಿದೆ. ಅಧಿಕೃತ ಅಂದಾಜುಗಳು ಮತ್ತು ಭೂವೈಜ್ಞಾನಿಕ ಸಮೀಕ್ಷೆಗಳ ಪ್ರಕಾರ, ಈ ದೇಶವು ಅಪರೂಪದ ಮಣ್ಣಿನ ಧಾತುಗಳು ಲಿಥಿಯಂ, ಟಂಗ್‌ಸ್ಟನ್, ತಾಮ್ರ, ಮಾಲಿಬ್ಡಿನಮ್, ಯುರೇನಿಯಂ, ಚಿನ್ನ, ಬೆಳ್ಳಿ, ಗ್ರಾಫೈಟ್ ಮತ್ತು ಫ್ಲೋರ್‌ಸ್ಪಾರ್‌ಗಳಂತಹ ವಾಣಿಜ್ಯಿಕವಾಗಿ ಮಹತ್ವದ ನಿಕ್ಷೇಪಗಳನ್ನು ಹೊಂದಿದೆ. ಈ ಖನಿಜಗಳಲ್ಲಿ ಹಲವು ಬ್ಯಾಟರಿಗಳು, ನವೀಕರಿಸಬಹುದಾದ ಇಂಧನ ತಂತ್ರಜ್ಞಾನ ಮತ್ತು ರಕ್ಷಣಾ ವಲಯದ ಉತ್ಪಾದನೆಗೆ ಅತ್ಯಗತ್ಯವಾಗಿವೆ. ಇತ್ತೀಚಿನ ವರ್ಷಗಳಲ್ಲಿ, ಉಜ್ಬೇಕಿಸ್ತಾನ್ ತನ್ನ ಗಣಿಗಾರಿಕೆ ವಲಯಕ್ಕೆ ವಿದೇಶಿ ಹೂಡಿಕೆಯನ್ನು ಆಕರ್ಷಿಸಲು ಮಹತ್ವಾಕಾಂಕ್ಷೆಯ ಕಾರ್ಯಕ್ರಮವೊಂದನ್ನು ಪ್ರಾರಂಭಿಸಿದೆ. ಕೇವಲ ಕಚ್ಚಾ ಅದಿರನ್ನು ರಫ್ತು ಮಾಡುವ ಬದಲು, ಭೂವೈಜ್ಞಾನಿಕ ಪರಿಶೋಧನೆ, ಖನಿಜ ಸಂಸ್ಕರಣೆ ಮತ್ತು ಮೌಲ್ಯವರ್ಧಿತ ಉತ್ಪಾದನೆಗೆ ಸರ್ಕಾರವು ಆದ್ಯತೆ ನೀಡಿದೆ.ಭಾರತಕ್ಕೆ ಇದು ಕೇವಲ ಗಣಿಗಾರಿಕೆಯಲ್ಲಿ ಮಾತ್ರವಲ್ಲದೇ, ಮುಂದಿನ ಹಂತದ ಸಂಸ್ಕರಣೆ ಮತ್ತು ಶುದ್ಧೀಕರಣ ಪ್ರಕ್ರಿಯೆಗಳಲ್ಲೂ ಪಾಲ್ಗೊಳ್ಳಲು ಒಂದು ಅವಕಾಶವನ್ನು ಒದಗಿಸುತ್ತದೆ. ಭಾರತವು ತನ್ನ ಅಪರೂಪದ ಖನಿಜಗಳ ಅಗತ್ಯದ ಗಣನೀಯ ಭಾಗವನ್ನು ಚೀನಾದ ಪೂರೈಕೆ ಸರಪಳಿಗಳಿಂದ ನೇರವಾಗಿ ಅಥವಾ ಪರೋಕ್ಷವಾಗಿ ಆಮದು ಮಾಡಿಕೊಳ್ಳುತ್ತದೆ.

**ಭಾರತದ ಬಾಂಧವ್ಯ ಉತ್ತಮ**

### ಯುದ್ದ ಸಾಮಗ್ರಿಗಳಿಗೆ ಮುಖ್ಯ

ಅಪರೂಪದ ಭೂಮಿಯು ಆಧುನಿಕ ಮಿಲಿಟರಿ ವ್ಯವಸ್ಥೆಗಳಿಗೆ ಅನಿವಾರ್ಯವಾಗಿದೆ. ಅವುಗಳನ್ನು ಯುದ್ಧ ವಿಮಾನಗಳು, ನಿಖರ-ನಿರ್ದೇಶಿತ ಯುದ್ಧಸಾಮಗ್ರಿಗಳು, ಡ್ರೋನ್‌ಗಳು, ಎಲೆಕ್ಟ್ರಾನಿಕ್ ಯುದ್ಧ ವ್ಯವಸ್ಥೆಗಳು, ಸೋನಾರ್ ಉಪಕರಣಗಳು, ಮಿಲಿಟರಿ ಸಂವಹನಗಳು, ರಾಡಾರ್ ಮತ್ತು ಕ್ಷಿಪಣಿ ಮಾರ್ಗದರ್ಶನ ತಂತ್ರಜ್ಞಾನಗಳಲ್ಲಿ ಬಳಸಲಾಗುತ್ತದೆ. ಆತ್ಮನಿರ್ಭರ ಭಾರತ ಉಪಕ್ರಮದ ಅಡಿಯಲ್ಲಿ ರಕ್ಷಣಾ ದೇಶೀಕರಣದ ಮೇಲೆ ಭಾರತ ಹೆಚ್ಚುತ್ತಿರುವ ಒತ್ತು ನೀಡುವುದರಿಂದ ಈ ಸಾಮಗ್ರಿಗಳಿಗೆ ಸುರಕ್ಷಿತ ಪ್ರವೇಶದ ಅಗತ್ಯವಿದೆ. ಉಜ್ಬೇಕಿಸ್ತಾನ್‌ನಂತಹ ಖನಿಜ-ಸಮೃದ್ಧ ದೇಶಗಳೊಂದಿಗೆ ಪಾಲುದಾರಿಕೆಗಳು ಭಾರತದ ದೀರ್ಘಕಾಲೀನ ರಕ್ಷಣಾ ಕೈಗಾರಿಕಾ ನೆಲೆಯನ್ನು ಬಲಪಡಿಸಬಹುದು. ಎರಡೂ ದೇಶಗಳ ನಡುವಿನ ಚರ್ಚೆಗಳು ಸಹಕಾರವು ಸರಳ ಆಮದುಗಳನ್ನು ಮೀರಿ ವಿಸ್ತರಿಸಬಹುದು ಎಂದು ಸೂಚಿಸುತ್ತದೆ. ಸಂಭಾವ್ಯ ಕ್ಷೇತ್ರಗಳಲ್ಲಿ ಜಂಟಿ ಭೂವೈಜ್ಞಾನಿಕ ಸಮೀಕ್ಷೆಗಳು, ಪರಿಶೋಧನಾ ಯೋಜನೆಗಳು, ಗಣಿಗಾರಿಕೆ ಹೂಡಿಕೆಗಳು, ಸಂಸ್ಕರಣೆ ಮತ್ತು ಸಂಸ್ಕರಣಾ ಸೌಲಭ್ಯಗಳು, ತಂತ್ರಜ್ಞಾನ ವರ್ಗಾವಣೆ, ಸಂಶೋಧನಾ ಸಹಯೋಗ ಮತ್ತು ಗಣಿಗಾರಿಕೆ ವೃತ್ತಿಪರರ ತರಬೇತಿ ಸೇರಿವೆ. ಈ ಉಪಕ್ರಮಗಳು ಜಾರಿಗೆ ಬಂದರೆ, ಭಾರತವು ನಿರ್ಣಾಯಕ ಖನಿಜ ಮೌಲ್ಯ ಸರಪಳಿಯಲ್ಲಿ ಉನ್ನತ ಸ್ಥಾನಕ್ಕೆ ಸಾಗಲು ಅನುವು ಮಾಡಿಕೊಡುತ್ತದೆ. ಭಯೋತ್ಪಾದನಾ ನಿಗ್ರಹ, ರಕ್ಷಣಾ ಸಹಕಾರ, ಸಂಪರ್ಕ, ಔಷಧಗಳು, ಶಿಕ್ಷಣ, ಮಾಹಿತಿ ತಂತ್ರಜ್ಞಾನ ಮತ್ತು ಶಕ್ತಿಯಂತಹ ಸಾಂಪ್ರದಾಯಿಕ ಕ್ಷೇತ್ರಗಳ ಜೊತೆಗೆ ನಿರ್ಣಾಯಕ ಖನಿಜಗಳು ಭಾರತ ಉಜ್ಬೇಕಿಸ್ತಾನ್ ಸಂಬಂಧಗಳ ಪ್ರಮುಖ ಆಧಾರಸ್ತಂಭವಾಗುತ್ತಿವೆ.

## ಪ್ರಧಾನಿ ಮೋದಿಯಿಂದ ಮಾತ್ರ ಪರೀಕ್ಷಾ ಸುಧಾರಣೆ ಸಾಧ್ಯ; ಲೋಕಸಭೆಯಲ್ಲಿ ವಿಪಕ್ಷಗಳ ಬೆವರಿಳಿಸಿದ ತೇಜಸ್ವಿ ಸೂರ್ಯ

• ಉದಯವಾಹಿನಿ, ನವದೆಹಲಿ

ಲೋಕಸಭೆ ಮತ್ತು ರಾಜ್ಯಸಭೆಯಲ್ಲಿ ಈಗಾಗಲೇ ಪ್ರಶ್ನೆಪತ್ರಿಕೆ ಸೋರಿಕೆ ತಡೆ ತಿದ್ದುಪಡಿ ಮಸೂದೆ ಮಂಡನೆಯಾಗಿ ರಾಷ್ಟ್ರಪತಿಗಳಿಂದಲೂ ಅಂಗೀಕಾರಗೊಂಡಿದೆ. ಈ ಸಮಯದಲ್ಲಿ ಬೆಂಗಳೂರು ದಕ್ಷಿಣ ಲೋಕಸಭಾ ಕ್ಷೇತ್ರದ ಬಿಜೆಪಿ ಸಂಸದ ತೇಜಸ್ವಿ ಸೂರ್ಯ ಲೋಕಸಭಾ ಮುಂಗಾರು ಅಧಿವೇಶನದಲ್ಲಿ ಮಾಡಿರುವ ಭಾಷಣದ ವಿಡಿಯೋಗಳು ಸಾಮಾಜಿಕ ಜಾಲತಾಣದಲ್ಲಿ ಮತ್ತೆ ಸದ್ದು ಮಾಡುತ್ತಿವೆ.

ಲೋಕಸಭೆಯಲ್ಲಿ ಪ್ರಶ್ನೆಪತ್ರಿಕೆ ಸೋರಿಕೆ ತಡೆ ತಿದ್ದುಪಡಿ ಮಸೂದೆಯ ಮಂಡನೆ ವೇಳೆ ಮಾತನಾಡಿದ್ದ ತೇಜಸ್ವಿ ಸೂರ್ಯ ವಿರೋಧ ಪಕ್ಷಗಳ ಬೆವರಿಳಿಸಿದ್ದಾರೆ. ದೇಶದ ಯುವಕರಿಗೆ ನ್ಯಾಯಯುತ ಪರೀಕ್ಷಾ ವ್ಯವಸ್ಥೆ ಮತ್ತು ಶಾಶ್ವತ ಪರಿಹಾರ ಬೇಕು. ಪ್ರಧಾನಿ ನರೇಂದ್ರ ಮೋದಿ ನೇತೃತ್ವದ ಸರ್ಕಾರ ಶಿಕ್ಷಣ ವ್ಯವಸ್ಥೆಯಲ್ಲಿ ಸುಧಾರಣೆ ತರಲಿದೆ ಎಂಬ ನಂಬಿಕೆ ವಿದ್ಯಾರ್ಥಿಗಳಲ್ಲಿದೆ. ಪ್ರಧಾನಿ ಮೋದಿಯಿಂದ ಮಾತ್ರ ಪರೀಕ್ಷಾ ಸುಧಾರಣೆ ಸಾಧ್ಯ. ಪ್ರಧಾನಿ ಮೋದಿ ಈ ದೇಶದ ಯುವಕರನ್ನು ನಿರಾಸೆಗೊಳಿಸುವುದಿಲ್ಲ ಎಂದು ತೇಜಸ್ವಿ ಸೂರ್ಯ ಹೇಳಿದ್ದಾರೆ.

ಪ್ರಶ್ನೆಪತ್ರಿಕೆ ಸೋರಿಕೆಯಿಂದ ಲಕ್ಷಾಂತರ ವಿದ್ಯಾರ್ಥಿಗಳ ಭವಿಷ್ಯ ಹಾಳಾಗುತ್ತಿದೆ. ಸಾಮಾನ್ಯ ಮತ್ತು ಬಡ ಕುಟುಂಬಗಳ ಮಕ್ಕಳಿಗೆ ನ್ಯಾಯಯುತ ಪರೀಕ್ಷಾ ವ್ಯವಸ್ಥೆಯೇ ಬದುಕು ಕಟ್ಟಿಕೊಳ್ಳುವ ದೊಡ್ಡ ಅವಕಾಶವಾಗಿದೆ. ಅದನ್ನು ಕಾಪಾಡುವುದು ಎಲ್ಲರ ಜವಾಬ್ದಾರಿ. ಒಂದು ವಾರದಿಂದ ವಿರೋಧ ಪಕ್ಷಗಳು ಪೇಪರ್ ಲೀಕ್ ಬಗ್ಗೆ ಚರ್ಚೆ ನಡೆಸಬೇಕು ಎಂದು ಒತ್ತಾಯಿಸಿದ್ದವು.

ಆದರೆ ಸರ್ಕಾರವೇ ಕಠಿಣ ಕಾನೂನು ತಿದ್ದುಪಡಿ ವಿಧೇಯಕ ತಂದು ಚರ್ಚೆಗೆ ಅವಕಾಶ ನೀಡಿದಾಗ ಅದೇ ವಿರೋಧ ಪಕ್ಷಗಳು ರಾಜಕೀಯ ಕಾರಣಕ್ಕಾಗಿ ಕಲಾಪಕ್ಕೆ ಅಡ್ಡಿಪಡಿಸುತ್ತಿವೆ ಎಂದು ತೇಜಸ್ವಿ ಸೂರ್ಯ ಆರೋಪಿಸಿದ್ದರು. ಬಡ ಮತ್ತು ಸಾಮಾನ್ಯ ಕುಟುಂಬದಿಂದ ಬರುವ ಯುವಕರಿಗೆ ಸಮಾಜದಲ್ಲಿ ಬೆಳೆಯಲು ಹಾಗೂ ಯಶಸ್ಸು ಕಾಣಲು ಶಿಕ್ಷಣ ಒಂದೇ ಮುಖ್ಯ ದಾರಿ.



ಶ್ರೀಮಂತ ಕುಟುಂಬಗಳ ಮಕ್ಕಳಿಗೆ ಬೇರೆ ಬೇರೆ ಆಯ್ಕೆಗಳಿರಬಹುದು, ಆದರೆ ಸಾಮಾನ್ಯ ಕುಟುಂಬದ ಮಕ್ಕಳಿಗೆ ಪರೀಕ್ಷೆಗಳೇ ದಾರಿ. ಪರೀಕ್ಷೆ ಎಂಬುದು ಜಾತಿ, ಪೋಷಕರ ಆದಾಯ ಅಥವಾ ಹಿನ್ನೆಲೆಯನ್ನು ಕೇಳದೆ ಕೇವಲ ಶ್ರಮಕ್ಕೆ ಗೌರವ ನೀಡುವ ವ್ಯವಸ್ಥೆ. ಆದರೆ ಪರೀಕ್ಷಾ ಪ್ರಶ್ನೆ ಪತ್ರಿಕೆ ಸೋರಿಕೆಯಾದರೆ ಅದು ಕೇವಲ ಆಡಳಿತಾತ್ಮಕ ಲೋಪವಲ್ಲ, ಯುವಜನರ ನಂಬಿಕೆಗೆ ಮಾಡುವ ವಿಶ್ವಾಸಘಾತುಕತನ. ಮೋದಿ ಸರ್ಕಾರವು ರಚನಾತ್ಮಕ ಸುಧಾರಣೆಗಳನ್ನು ಕೈಗೊಳ್ಳುತ್ತಿದೆ ಮತ್ತು ಪರೀಕ್ಷಾ ವ್ಯವಸ್ಥೆಯನ್ನು ಬಲಪಡಿಸಲು, ಭವಿಷ್ಯದ ಪ್ರಶ್ನೆಪತ್ರಿಕೆ ಸೋರಿಕೆಯನ್ನು ತಡೆಯಲು ಮತ್ತು ವ್ಯವಸ್ಥೆಯನ್ನು ಒಮ್ಮೆ ಮತ್ತು ಶಾಶ್ವತವಾಗಿ ಸರಿಪಡಿಸಲು ಸದೃಢ ವಿಧಾನವನ್ನು ಅನುಸರಿಸುತ್ತಿದೆ'' ಎಂದು ತೇಜಸ್ವಿ ಸೂರ್ಯ ಹೇಳಿದ್ದರು.

ಮುಖ್ಯಮಂತ್ರಿ ಡಿಕೆ ಶಿವಕುಮಾರ್ ದೆಹಲಿಗೆ ಬಂದು ನೀಟ್ ಹಗರಣದ ವಿರುದ್ಧ ಪ್ರತಿಭಟನೆ ಮಾಡುತ್ತಾರೆ. ಪ್ರಧಾನಿ ನರೇಂದ್ರ ಮೋದಿ ನೇತೃತ್ವದ ಸರ್ಕಾರ ಶಿಕ್ಷಣ ವ್ಯವಸ್ಥೆಯಲಿಆದರೆ ಕೆಪಿಎಸ್‌ಸಿ ಹಗರಣದಲ್ಲಿ ಸಾವಿರಾರು ವಿದ್ಯಾರ್ಥಿಗಳು ಬೆಂಗಳೂರಿನ ಫ್ರೀಡಂ ಪಾರ್ಕ್‌ನಲ್ಲಿ ಹೋರಾಟ ಮಾಡುತ್ತಿರುವುದು ಮುಖ್ಯಮಂತ್ರಿಗಳಿಗೆ ಕಾಣುತ್ತಿಲ್ಲವೇ ಎಂದು ಬಿಜೆಪಿ ಸಂಸದ ತೇಜಸ್ವಿ ಸೂರ್ಯ ಸಂಸತ್ ಅಧಿವೇಶನದಲ್ಲಿ ಪ್ರಶ್ನಿಸಿದ್ದರು.

## ಬಿಎಂಟಿಸಿ ಬಸ್ಸುಗಳಲ್ಲಿ ಬರಲಿದೆ ಆಡಿಯೋ ಜಾಹೀರಾತು

• ಉದಯವಾಹಿನಿ, ಬೆಂಗಳೂರು

ತನ್ನ ಟಿಕೆಟ್‌ಯೇತರ ಆದಾಯವನ್ನು ಹೆಚ್ಚಿಸಿಕೊಳ್ಳುವ ಸಲುವಾಗಿ ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆಯು 300 ಬಸ್‌ಗಳಲ್ಲಿ ಶ್ರಾವ್ಯ (ಆಡಿಯೋ) ಜಾಹೀರಾತುಗಳನ್ನು ಪ್ರಾರಂಭಿಸಲು ಮುಂದಾಗಿದೆ. ಸಂಸ್ಥೆಯು ಟೆಂಡರ್ ಆಹ್ವಾನಿಸಿದ್ದು, ಬೆಂಗಳೂರು ನಗರದಲ್ಲಿ ಸಂಚರಿಸುವ 300 ನಾನ್ ಎಸಿ ಬಸ್‌ಗಳಲ್ಲಿ ಮೂರು ವರ್ಷಗಳ ಅವಧಿಗೆ 'ಇನ್-ಬಸ್ ಆಡಿಯೋ ಜಾಹೀರಾತು ವ್ಯವಸ್ಥೆ'ಯನ್ನು ಅಳವಡಿಸಲು, ನಿರ್ವಹಿಸಲು ಹಾಗೂ ಚಾಲನೆ ಮಾಡಲು ಹಾಗೂ ಸಂಪೂರ್ಣ ಹಕ್ಕನ್ನು ನೀಡಲು ಉದ್ದೇಶಿಸಿದೆ. ಈ ಅವಧಿಯನ್ನು ಬಳಿಕ ಇನ್ನ ಮೂರು ವರ್ಷಗಳಿಗೆ ವಿಸ್ತರಿಸುವ ಅವಕಾಶವೂ ಇದೆ.

ಮೊದಲ ಹಂತದಲ್ಲಿ ಈ ವ್ಯವಸ್ಥೆಯನ್ನು ಸಾಮಾನ್ಯ, ಎಕ್ಸ್‌ಪ್ರೆಸ್ ಹಾಗೂ ರಾತ್ರಿ ಸೇವೆಯ ಬಸ್‌ಗಳಲ್ಲಿ ಅಳವಡಿಸಲಾಗುತ್ತದೆ. ಪ್ರತಿಯೊಂದು ಜಾಹೀರಾತು 10 ಸೆಕೆಂಡುಗಳಿಗೆ ಸೀಮಿತವಾಗಿದ್ದು, ಕಡ್ಡಾಯವಾಗಿ ಕನ್ನಡದಲ್ಲಿರಬೇಕು. ಇಂಗ್ಲಿಷ್ ಮತ್ತು ಹಿಂದಿ ಆವೃತ್ತಿಗಳು ಜಾಹೀರಾತುಗಳಲ್ಲಿ ಯಾವುದೇ ಆಕ್ಷೇಪಾರ್ಹ, ಅಶ್ಲೀಲ, ರಾಜಕೀಯವಾಗಿ ಪಕ್ಷಪಾತದ ಅಥವಾ ಕೋಮು ಸೂಕ್ಷ್ಮ ವಿಷಯಗಳು ಇರಬಾರದು. ಪ್ರತಿಯೊಂದು ಜಾಹೀರಾತಿಗೂ ಬಿಎಂಟಿಸಿಯಿಂದ ಪೂರ್ವಾನ್ವಯ ಲಿಖಿತ ಅನುಮೋದನೆ ಪಡೆಯುವುದು ಕಡ್ಡಾಯವಾಗಿದೆ.

ಈ ಕೇಂದ್ರೀಕೃತ ವ್ಯವಸ್ಥೆಯು ವಾಣಿಜ್ಯ ಆಡಿಯೋ ಜಾಹೀರಾತುಗಳನ್ನು ಬಿಎಂಟಿಸಿಯ ಜಿಪಿಎಸ್ ಮತ್ತು ಇಂಟೆಲಿಜೆಂಟ್ ಟ್ರಾನ್ಸ್‌ಪೋರ್ಟ್ ಸಿಸ್ಟಮ್ ನೊಂದಿಗೆ ಸಂಯೋಜಿಸಿ, ಬಸ್ ಇರುವ ಸ್ಥಳಕ್ಕೆ ಅನುಗುಣವಾಗಿ ಜಾಹೀರಾತುಗಳನ್ನು ಬಿತ್ತರಿಸುತ್ತದೆ. ತನ್ನದೇ ಆದ ಅಧಿಕೃತ ಪ್ರಕಟಣೆಗಳು, ಸಾರ್ವಜನಿಕ ಸೇವಾ ಸಂದೇಶಗಳು ಹಾಗೂ ಇತರ ಸಂವಹನಗಳಿಗಾಗಿ ಬಿಎಂಟಿಸಿಯು ಒಟ್ಟು ಪ್ರಸಾರದ ಶೇ. 10 ರಷ್ಟು ಸಮಯವನ್ನು ಕಾಯ್ದಿರಿಸಿಕೊಳ್ಳಲಿದೆ. ಟೆಂಡರ್ ಪಡೆದ ಕಂಪನಿಯು ಬಿಎಂಟಿಸಿಗೆ ಮಾಸಿಕ ಪರವಾನಗಿ ಶುಲ್ಕವನ್ನು ಪಾವತಿಸಬೇಕಿದ್ದು, ಎರಡನೇ ವರ್ಷದಿಂದ ಪ್ರತಿ ವರ್ಷ ಶೇ. 5 ರಷ್ಟು ಶುಲ್ಕ ಹೆಚ್ಚಳವಾಗಲಿದೆ.


ಬಿಡ್‌ಗಳನ್ನು ಸಲ್ಲಿಸಲು ಆಗಸ್ಟ್ 31 ಕೊನೆಯ ದಿನವಾಗಿದೆ. ಸೆಪ್ಟೆಂಬರ್ 2 ರಂದು ತಾಂತ್ರಿಕ ಬಿಡ್‌ಗಳನ್ನು ತೆರೆಯಲಾಗುವುದು ಮತ್ತು ಆರ್ಥಿಕ ಬಿಡ್‌ಗಳನ್ನು ತೆರೆಯುವ ದಿನಾಂಕವನ್ನು ನಂತರ ಪ್ರಕಟಿಸಲಾಗುವುದು ಎಂದು ಟೆಂಡರ್ ದಾಖಲೆಯಲ್ಲಿ ತಿಳಿಸಲಾಗಿದೆ. ಒಟ್ಟು 6,955 ಬಸ್‌ಗಳನ್ನೊಳಗೊಂಡ ಬಿಎಂಟಿಸಿಯು ದಿನಂಪ್ರತಿ 6,272 ಸೇವೆಗಳನ್ನು ನೀಡುತ್ತಿದ್ದು, 67,841 ಟ್ರಿಪ್‌ಗಳಲ್ಲಿ 12.28 ಲಕ್ಷ ಕಿಲೋಮೀಟರ್‌ಗಳಷ್ಟು ಚಲಿಸುತ್ತದೆ. ಪ್ರಸ್ತುತ 7.19 ಕೋಟಿ ರೂ. ದಿನನಿತ್ಯದ ಸಂಚಾರ ಆದಾಯ ಹೊಂದಿರುವ ಸಂಸ್ಥೆಯು, ಬಸ್‌ಗಳ ಮೇಲೆ ಸಂಪೂರ್ಣ ಜಾಹೀರಾತು ಅಳವಡಿಕೆ ಮತ್ತು ವಾಣಿಜ್ಯ ಮಳಿಗೆಗಳ ಬಾಡಿಗೆ ಸೇರಿದಂತೆ ಇತರ ಆದಾಯದ ಮೂಲಗಳನ್ನು ಅನ್ವೇಷಿಸುತ್ತಿದೆ.

ಹೊಸ ಮಾರ್ಗಗಳನ್ನು ಸಕ್ರಿಯವಾಗಿ ಸೇರಿಸಿದ ನಂತರ ಬಿಎಂಟಿಸಿಯ ಸಂಚಾರ ಆದಾಯವು 2024-25 ರಲ್ಲಿ 2,039 ಕೋಟಿ ರೂ.ನಿಂದ 2025-26 ರಲ್ಲಿ 2,677.51 ಕೋಟಿ ರೂ.ಗೆ ಏರಿಕೆಯಾಗಿದೆ. ಮೊದಲ ಹಂತದಲ್ಲಿ ಈ ವ್ಯವಸ್ಥೆಯನ್ನು ಸಾಮಾನ್ಯ ಈ ಕೇಂದ್ರೀಕೃತ ವ್ಯವಸ್ಥೆಯು ವಾಣಿಜ್ಯ ಆಡಿಯೋ ಜಾಹೀರಾತುಗಳನ್ನು ವಾಣಿಜ್ಯ ಆದಾಯವು 345 ಕೋಟಿ ರೂ.ನಿಂದ 240 ಕೋಟಿ ರೂ.ಗೆ ಕುಸಿದ ಕಾರಣ, ಟಿಕೆಟ್‌ಯೇತರ ಆದಾಯವು 729 ಕೋಟಿ ರೂ.ನಿಂದ 708 ಕೋಟಿ ರೂ.ಗೆ ಇಳಿಕೆಯಾಗಿದೆ.

## ಸಚಿವ ಸಂಪುಟ ವಿಸ್ತರಣೆ ರಾಜ್ಯದ ಅಭಿವೃದ್ಧಿಗಲ್ಲ, ಹಣಬಲ ಹೈಕಮಾಂಡ್ ರಾಜಕಾರಣಕ್ಕೆ: ಬಿವೈವಿ

• ಉದಯವಾಹಿನಿ, ಬೆಂಗಳೂರು

ಕಾಂಗ್ರೆಸ್ ಸರ್ಕಾರದ ಸಚಿವ ಸಂಪುಟ ವಿಸ್ತರಣೆಯು ರಾಜ್ಯದ ಅಭಿವೃದ್ಧಿ, ಜನಹಿತ ಅಥವಾ ಉತ್ತಮ ಆಡಳಿತದ ಉದ್ದೇಶದಿಂದ ನಡೆದಿಲ್ಲ. ಅಧಿಕಾರದ ಹಂಚಿಕೆ, ಹಣಬಲ, ಗುಂಪುಗಾರಿಕೆ ಹಾಗೂ ಹೈಕಮಾಂಡ್ ರಾಜಕಾರಣದ ಫಲವಾಗಿ ಸಚಿವ ಸಂಪುಟ ವಿಸ್ತರಣೆ ನಡೆದಿದೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಹಾಗೂ ಶಾಸಕ ಬಿ.ವೈ. ವಿಜಯೇಂದ್ರ ಆರೋಪಿಸಿದರು. ಬೆಂಗಳೂರಿನಲ್ಲಿ ಮಾತಾಡಿದ ಅವರು, ರೇಟ್ ಫಿಕ್ಸ್ ಆಗದೇ ಡೇಟ್ ಫಿಕ್ಸ್ ಆಗಲಿಲ್ಲ ಎಂಬ ಆರೋಪಕ್ಕೆ ಕಾಂಗ್ರೆಸ್‌ನಾಯಕರೇ ಸಾಕ್ಷಿ. ಸಚಿವ ಸಂಪುಟ ವಿಸ್ತರಣೆ ಕುರಿತು ನಾನು ಆರಂಭದಿಂದಲೂ ರೇಟ್ ಫಿಕ್ಸ್ ಆಗದೆ ಡೇಟ್ ಫಿಕ್ಸ್ ಆಗಲಿಲ್ಲ ಎಂದು ಹೇಳಿದ್ದೆ. ಇಂದು ಕಾಂಗ್ರೆಸ್‌ನ ಹಿರಿಯ ನಾಯಕರು, ಮಾಜಿ ಸಚಿವರು ಮತ್ತು ಶಾಸಕರು ನೀಡಿರುವ ಬಹಿರಂಗ ಹೇಳಿಕೆಗಳೇ ತಮ್ಮ ಆರೋಪಕ್ಕೆ ಪುಷ್ಟಿ ನೀಡಿವೆ. ಕಾಂಗ್ರೆಸ್ ಪಕ್ಷದೊಳಗಿನ ಅಸಮಾಧಾನವೇ ಸಚಿವ ಸಂಪುಟ ರಚನೆಯ ಹಿಂದಿನ ವಾಸ್ತವವನ್ನು ಬಯಲಿಗೆಳೆಯುತ್ತಿದೆ ಎಂದು ಟಾಂಗ್ ಕೊಟ್ಟರು. ಕಾಂಗ್ರೆಸ್ ಹಿರಿಯ ನಾಯಕರ ಅಸಮಾಧಾನ ಭುಗಿಲೆದ್ದಿದೆ: ಹಿರಿಯ ಶಾಸಕ ತನ್ವೀರ್ ಸೇಠ್ ಅವರು ಪಕ್ಷ ವಿರೋಧಿ ಚಟುವಟಿಕೆ ನಡೆಸಿದವರಿಗೂ ಸಚಿವ ಸ್ಥಾನ ನೀಡಲಾಗಿದೆ ಎಂದು ಆರೋಪಿಸಿದ್ದಾರೆ. ಮಾಜಿ ಸಚಿವ ಟಿ.ಬಿ.ಜಯಚಂದ್ರ ಅವರು 'ನಾನು ಕಾಂಗ್ರೆಸಿಗ ಎಂದು ಹೇಳಿಕೊಳ್ಳಲು ನಾಚಿಕೆಯಾಗುತ್ತಿದೆ' ಎಂದು ಬೇಸರ ವ್ಯಕ್ತಪಡಿಸಿದ್ದಾರೆ. ಶಾಸಕ ಎಸ್.ಆರ್. ಶ್ರೀನಿವಾಸ್ ಅವರು ಹಣ ನೀಡಲು ಸಾಧ್ಯವಾಗದ ಕಾರಣ ಸಚಿವ ಸ್ಥಾನ ಸಿಗಲಿಲ್ಲ ಎಂದು ಮಾರ್ಮಿಕವಾಗಿ ಹೇಳಿದ್ದು, ಮಾಜಿ ಸಚಿವ ಎಂ.ಸಿ.ಸುಧಾಕರ್ ಹಾಗೂ ಎಸ್.ಎನ್ .ನಾರಾಯಣಸ್ವಾಮಿ ಸೇರಿದಂತೆ ಹಲವು ನಾಯಕರು ವ್ಯಕ್ತಪಡಿಸಿರುವ ಅಸಮಾಧಾನ ಕಾಂಗ್ರೆಸ್‌ನ ಆಂತರಿಕ ಸ್ಥಿತಿಯನ್ನು ಬಯಲಿಗೆ ತಂದಿದೆ ಎಂದು ಹೇಳಿದರು. ಮಾಜಿ ಸಚಿವ ತಿಮ್ಮಾಪುರ್ ಅವರು ಕಾಂಗ್ರೆಸ್ ಹೈಕಮಾಂಡ್ ಗೆ ಹಣ ನೀಡಿದವರಿಗೆ ಹಾಗೂ ಪ್ರಭಾವ ಹೊಂದಿದವರಿಗೆ ಮಾತ್ರ ಸಚಿವ ಸ್ಥಾನ ನೀಡಲಾಗಿದೆ ಎಂದು ಬಹಿರಂಗವಾಗಿ ಆರೋಪಿಸಿದ್ದಾರೆ. ಇಂತಹ ಗಂಭೀರ ಆರೋಪದ ಕುರಿತು ಕಾಂಗ್ರೆಸ್ ನಾಯಕರು ರಾಜ್ಯದ ಜನತೆಗೆ ಸ್ಪಷ್ಟನೆ ನೀಡಬೇಕು ಎಂದು ವಿಜಯೇಂದ್ರ ಆಗ್ರಹಿಸಿದರು. ಮಹಿಳಾ ಸಬಲೀಕರಣದ ಬಗ್ಗೆ ಮಾತನಾಡುವ ಕಾಂಗ್ರೆಸ್ ಸರ್ಕಾರ, ಸಚಿವ ಸಂಪುಟದಲ್ಲಿ ಒಬ್ಬ ಮಹಿಳೆಗೂ ಅವಕಾಶ ನೀಡಿಲ್ಲ. ಕೊನೆಯ ಕ್ಷಣದಲ್ಲಿ ಗಾಯತ್ರಿ ಶಾಂತೇಗೌಡ ಅವರ ಹೆಸರನ್ನು ಕೈಬಿಡುವ ಮೂಲಕ ಮಹಿಳೆಯರ ಬಗ್ಗೆ ತನ್ನ ನಿಜವಾದ ಮನೋಭಾವವನ್ನು ಕಾಂಗ್ರೆಸ್ ಪ್ರದರ್ಶಿಸಿದೆ ಎಂದು ಟೀಕಿಸಿದರು. ಈ ಸಚಿವ ಸಂಪುಟ ವಿಸ್ತರಣೆ ರಾಜ್ಯದ ಹಿತದೃಷ್ಟಿಯಿಂದ ನಡೆದಿಲ್ಲ. ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ನಡುವಿನ ಅಧಿಕಾರದ ಪೈಪೋಟಿ ಮತ್ತು ಹೈಕಮಾಂಡ್‌ನ ರಾಜಕೀಯ ಸಮೀಕರಣಗಳೇ ಸಚಿವ ಸಂಪುಟ ವಿಸ್ತರಣೆಯ ಹಿಂದಿನ ಪ್ರಮುಖ ಕಾರಣಗಳಾಗಿವೆ ಎಂದು ಆರೋಪಿಸಿದರು. ಸಚಿವರ ಆಯ್ಕೆ ಮಾತ್ರವಲ್ಲ, ಯಾರಿಗೆ ಯಾವ ಖಾತೆ ನೀಡಬೇಕು ಎಂಬುದನ್ನೂ ದೆಹಲಿಯ ಕಾಂಗ್ರೆಸ್ ಹೈಕಮಾಂಡ್ ನಿರ್ಧರಿಸುವ ಪರಿಸ್ಥಿತಿ ನಿರ್ಮಾಣವಾಗಿದೆ. ಮುಖ್ಯಮಂತ್ರಿಗಳು ಮತ್ತೆ ಮತ್ತೆ ದೆಹಲಿಗೆ ತೆರಳಿ ಅನುಮೋದನೆ ಪಡೆಯಬೇಕಾದ ಪರಿಸ್ಥಿತಿ ರಾಜ್ಯದ ರಾಜಕೀಯ ಇತಿಹಾಸದಲ್ಲೇ ಅಪರೂಪವಾಗಿದೆ ಎಂದು ಹೇಳಿದರು.



> ವಿಧಾನಸಭೆಯ ಸ್ಪೀಕರ್, ಉಪಸಭಾಧ್ಯಕ್ಷರು, ವಿಧಾನ ಪರಿಷತ್ತಿನ ಸಭಾಪತಿ ಹಾಗೂ ಉಪಸಭಾಪತಿ ಹುದ್ದೆಗಳ ಕುರಿತು ಎಐಸಿಸಿ ಲೆಟರ್‌ಹೆಡ್‌ನಲ್ಲಿ ನಿರ್ದೇಶನ ನೀಡಿರುವುದು ಸಂವಿಧಾನದ ಆಶಯಕ್ಕೆ ವಿರುದ್ಧವಾಗಿದೆ. ಇಂತಹ ನಡೆ ವಿಧಾನಮಂಡಲದ ಸ್ವಾಯತ್ತತೆ ಮತ್ತು ಪ್ರಜಾಪ್ರಭುತ್ವದ ಮೌಲ್ಯಗಳಿಗೆ ಧಕ್ಕೆ ತರುವಂತದ್ದು . ವಿಜಯೇಂದ್ರ

### ರಾಜ್ಯದ ಅಭಿವೃದ್ಧಿಗಿಂತ ವೈಯಕ್ತಿಕ ಹಿತಾಸಕ್ತಿಗಳೇ ಕಾಂಗ್ರೆಸ್‌ಗೆ ಆದ್ಯತೆ

ಕಳೆದ ಮೂರು ವರ್ಷಗಳಲ್ಲಿ ರಾಜ್ಯದ ಅಭಿವೃದ್ಧಿಗೆ ಕಾಂಗ್ರೆಸ್ ಸರ್ಕಾರ ಯಾವುದೇ ಮಹತ್ವದ ಕೊಡುಗೆ ನೀಡಿಲ್ಲ. ಮುಂದಿನ ದಿನಗಳಲ್ಲಿಯೂ ಜನಹಿತಕ್ಕಿಂತ ವೈಯಕ್ತಿಕ ಹಾಗೂ ರಾಜಕೀಯ ಹಿತಾಸಕ್ತಿಗಳೇ ಸರ್ಕಾರದ ಆದ್ಯತೆಯಾಗಿವೆ. ರಾಜ್ಯದ ಜನತೆ ಈ ಸರ್ಕಾರದ ನಿಜಸ್ವರೂಪವನ್ನು ಅರಿತಿದ್ದು, ಸೂಕ್ತ ಸಮಯದಲ್ಲಿ ಪ್ರಜಾಪ್ರಭುತ್ವದ ಮೂಲಕ ತಕ್ಕ ಉತ್ತರ ನೀಡಲಿದ್ದಾರೆ ಎಂದು ಎಂದರು.

---

**ಈ ದಿನದ ದರ** ಪೆಟ್ರೋಲ್: 111.68₹/L | ಡೀಸೆಲ್ : 99.56₹/L | ಬಂಗಾರ: ₹ 14,575 /Gram 24ct ₹ 13,360/Gram 22ct | ಬೆಳ್ಳಿ: ₹235.00/

## ದಿನ ಭವಿಷ್ಯ

| | | |
|---|---|---|
| ರಾಹುಕಾಲ | ಮಧ್ಯಾಹ್ನ | 01:30 ರಿಂದ 03:00 |
| ಗುಳಿಕ ಕಾಲ | ಬೆಳಿಗ್ಗೆ | 09:00 ರಿಂದ 10:30 |
| ಯಮಗಂಡ ಕಾಲ | ಬೆಳಿಗ್ಗೆ | 06:00 ರಿಂದ 07:30 |

**ಮೇಷ** ನೀವು ಪ್ರೀತಿಸುವವರಿಂದ ಉಡುಗೊರೆಗಳನ್ನು ಪಡೆಯಲು ಹಾಗೂ ನೀಡಲು ಪವಿತ್ರವಾದ ದಿನ. ನೀವು ನಿಮ್ಮ ಪ್ರೀತಿಪಾತ್ರರೊಂದಿಗೆ ಎಲ್ಲಿಗಾದರೂ ಹೊರಗೆ ಹೋಗುತ್ತಿದ್ದರೆ ಬಟ್ಟೆಗಳನ್ನು ಚಿಂತನಶೀಲವಾಗಿ ಧರಿಸಿ. ನೀವು ಹಾಗೆ ಮಾಡದಿದ್ದರೆ ನಿಮ್ಮ ಪ್ರೇಮಿ ನಿಮ್ಮ ಮೇಲೆ ಕೋಪಗೊಳ್ಳಬಹುದು.

**ವೃಷಭ** ಪ್ರತಿ ವ್ಯಕ್ತಿಯನ್ನೂ ಆಲಿಸಿ ನಿಮ್ಮ ಸಮಸ್ಯೆಗಳಿಗೆ ಪರಿಹಾರ ದೊರಕಬಹುದು. ತಮ್ಮ ವ್ಯಾಪರಕ್ಕಾಗಿ ಮನೆಯಿಂದ ಹೊರಗೆ ಹೋಗಿರುವ ವ್ಯಾಪಾರಿಗಳು, ತನ್ನ ಹಣವನ್ನು ಜಾಗರೂಕವಾಗಿಡಿ, ಹಣದ ಕಳ್ಳತನವಾಗುವ ಸಾಧ್ಯತೆ ಇದೆ. ನೀವು ಬಾಕಿಯಿರುವ ಎಲ್ಲಾ ಕುಟುಂಬದ ಸಾಲಗಳನ್ನು ತೀರಿಸಲು ಸಾಧ್ಯವಾಗುತ್ತದೆ.

**ಮಿಥುನ** ಆರೋಗ್ಯವು ಇತರರೊಂದಿಗೆ ಸಂತೋಷವನ್ನು ಹಂಚಿಕೊಳ್ಳುವ ಮೂಲಕ ಅರಳುತ್ತದೆ. ಯಾವುದೇ ವ್ಯಕ್ತಿಯ ಸಹಾಯವಿಲ್ಲದೆ ನೀವು ಹಣವನ್ನು ಗಳಿಸಲು ಸಾಧ್ಯವಾಗುತ್ತದೆ. ನೀವು ನಿಮ್ಮ ಮೇಲೆ ನಂಬಿಕೆಯನ್ನಿಡುವ ಅಗತ್ಯವಿದೆ. ಪ್ರೀತಿ ದೇವರ ಪೂಜೆಗೆ ಪರ್ಯಾಯವಾಗಿದೆ.

**ಕರ್ಕಾಟಕ** ಬಸುರಿಯು ನೆಲದ ಮೇಲೆ ನಡೆದುಕೊಂಡು ಹೋಗುವಾಗ ವಿಶೇಷ ಕಾಳಜಿ ವಹಿಸಬೇಕು. ನಿಧಿಗಳ ಹಠಾತ್ ಒಳಹರಿವು ನಿಮ್ಮ ಪಾವತಿಗಳು ಮತ್ತು ತಕ್ಷಣದ ವೆಚ್ಚಗಳನ್ನು ನೋಡಿಕೊಳ್ಳುತ್ತದೆ. ನಿಮ್ಮ ಸಕಾಲಿಕ ಸಹಾಯ ಯಾರಾದರೊಬ್ಬರ ದೌರ್ಭಾಗ್ಯವನ್ನು ನಿವಾರಿಸುತ್ತದೆ.

**ಸಿಂಹ** ನಿಮ್ಮ ಸಂತೋಷದ ಪ್ರಕೃತಿ ಇತರರಿಗೆ ಸಂತೋಷ ತರುತ್ತದೆ. ಯಾವುದೇ ವ್ಯಕ್ತಿಯ ಸಹಾಯವಿಲ್ಲದೆ ನೀವು ಹಣವನ್ನು ಗಳಿಸಲು ಸಾಧ್ಯವಾಗುತ್ತದೆ. ನೀವು ನಿಮ್ಮ ಮೇಲೆ ನಂಬಿಕೆಯನ್ನಿಡುವ ಅಗತ್ಯವಿದೆ. ನಿಮ್ಮ ಪತ್ನಿಯ ಕೆಲಸವನ್ನು ಕಡಿಮೆ ಮಾಡಲು ಅವರಿಗೆ ಮನೆಗೆಲಸದಲ್ಲಿ ಸಹಾಯ ಮಾಡಿ.

**ಕನ್ಯಾ** ಮದ್ಯಪಾನ ಮಾಡಿದಲ್ಲಿ ಅದು ನಿಮ್ಮ ನಿದ್ರೆಗೆ ಭಂಗ ತಂದು ಆಳವಾದ ವಿಶ್ರಾಂತಿ ತೆಗೆದುಕೊಳ್ಳುವುದನ್ನು ತಡೆಗಟ್ಟಬಹುದಾದ್ದರಿಂದ ಹಾಗೆ ಮಾಡಬೇಡಿ. ಇಂದು ಷೇರು ಮಾರುಕಟ್ಟೆಯಲ್ಲಿ ಹಣವನ್ನು ಹೂಡಿಕೆ ಮಾಡುವವರು ತಮ್ಮ ಹಣವನ್ನು ಕಳೆದುಕೊಳ್ಳಬಹುದು.

**ತುಲಾ** ಹೊರಾಂಗಣ ಚಟುವಟಿಕೆಗಳು ಇಂದು ದಣಿವು ಮತ್ತು ಒತ್ತಡ ತರುತ್ತವೆ. ಇಂದಿನವರೆಗೂ ಹಣವನ್ನು ಯೋಚಿಸದೆ ಖರ್ಚು ಮಾಡುತ್ತಿದ್ದ ಜನರು, ಅವರಿಗೆ ಇಂದು ಹಣದ ತುಂಬಾ ಅಗತ್ಯವಿರಬಹುದು ಮತ್ತು ಜೀವನದಲ್ಲಿ ಹಣದ ಏನು ಮೌಲ್ಯವಿದೆ ಎಂದು ನಿಮಗೆ ಅರ್ಥವಾಗಬಹುದು.

**ವೃಶ್ಚಿಕ** ನಿಮ್ಮ ಆರೋಗ್ಯದ ಬಗ್ಗೆ ವಿಶೇಷವಾಗಿ ರಕ್ತದೊತ್ತಡ ರೋಗಿಗಳ ಬಗ್ಗೆ ಸ್ವಲ್ಪ ಜಾಗ್ರತೆಯಿಂದಿರಿ. ಇಂವು ನಿಮಗೆ ನಿಮ್ಮ ಸಹೋದರ ಅಥವಾ ಸಹೋದರಿಯ ಸಹಾಯದಿಂದ ಹಣದ ಲಾಭವಾಗುವ ಸಾಧ್ಯತೆ ಇದೆ ಇತರರ ಸಲಹೆಗಳನ್ನು ಕೇಳುವುದು ಮತ್ತು ಕಾರ್ಯಗತಗೊಳಿಸುವುದು ಪ್ರಮುಖವಾದ ಒಂದು ದಿನ.

**ಧನಸ್ಸು** ಒತ್ತಡದ ದಿನದ ಹೊರತಾಗಿಯೂ ಆರೋಗ್ಯ ಪರಿಪೂರ್ಣವಾಗಿರುತ್ತದೆ. ಕೆಲವು ಪ್ರಮುಖ ಯೋಜನೆಗಳನ್ನು ಕಾರ್ಯಗತಗೊಳಿಸಲಾಗುತ್ತದೆ ಹಾಗೂ ಅವು ನಿಮಗೆ ಹೊಸ ಆರ್ಥಿಕ ಲಾಭ ತರುತ್ತವೆ. ನೀವು ನಿಮ್ಮ ಜೀವನದಲ್ಲಿ ಅತ್ಯಂತ ಮಹತ್ವಪೂರ್ಣ ವ್ಯಕ್ತಿಗಳಿಗೆ ನಿಮ್ಮ ವಾದವನ್ನು ಮಂಡಿಸುವಲ್ಲಿ ತೊಂದರೆ ಹೊಂದಿರುತ್ತೀರಿ.

**ಮಕರ** ಸಂತೋಷದಿಂದ ತುಂಬಿದ ಒಳ್ಳೆಯ ದಿನ. ಪ್ರಾಚೀನ ವಸ್ತುಗಳು ಮತ್ತು ಆಭರಣಗಳಲ್ಲಿ ಹೂಡಿಕೆ ಲಾಭ ಮತ್ತು ಸಮೃದ್ಧಿ ತರುತ್ತದೆ. ಸ್ನೇಹಿತರು ನಿಮಗೆ ಬೆಂಬಲ ನೀಡಿದರೂ -ಆದರೆ ಮಾತುಗಳ ಬಗ್ಗೆ ಎಚ್ಚರದಿಂದಿರಿ ಇಂದು ನೀವು ನಿಮ್ಮ ಸಂಗಾತಿಯ ಹೃದಯ ಬಡಿತಗಳ ಜೊತೆಗಿರುತ್ತೀರಿ.

**ಕುಂಭ** ನಿಮ್ಮ ಶಕ್ತಿಯ ಮಟ್ಟ ಹೆಚ್ಚಿರುತ್ತದೆ. ನಿಮ್ಮ ಖರ್ಚುಗಳನ್ನು ನಿಯಂತ್ರಿಸಲು ಮತ್ತು ಕೇವಲ ಅಗತ್ಯವಾದ ವಸ್ತುಗಳ ಮಾತ್ರ ಇಂದು ಖರೀದಿಸಲು ಪ್ರಯತ್ನಿಸಿ. ಕಿರಿಯ ಸಹೋದರ ಸಹೋದರಿ ನಿಮ್ಮ ಸಲಹೆ ಪಡೆಯಸಬಹುದು. ನಿಮ್ಮ ಮಾತುಗಳನ್ನು ಸರಿಯಾಗಿ ಸಾಬೀತುಪಡಿಸಲು ನೀವು ನಿಮ್ಮ ಸಂಗಾತಿಯೊಂದಿಗೆ ಜಗಳವಾಡಬಹುದು.

**ಮೀನ** ವಿಶೇಷವಾಗಿ ಇದರ ಜೊತೆ ಸಾಮಾನ್ಯ ದೌರ್ಬಲ್ಯವಿದ್ದಾಗ ಇದನ್ನು ನಿರ್ಲಕ್ಷಿಸದಿರಿ. ವಿಶ್ರಾಂತಿ ಬಹಳ ಪ್ರಮುಖವಾಗಿರುತ್ತದೆ. ನಿಮ್ಮ ಹಣ ಖರ್ಚಾಗುತ್ತಿದೆ ಎಂಬುದರ ಮೇಲೆ ನಿಗಾ ಇರಿಸುವ ಅಗತ್ಯವಿದೆ ಇಲ್ಲದಿದ್ದರೆ ಮುಂಬರುವ ಸಮಯದಲ್ಲಿ ನೀವು ತೊಂದರೆಗೊಳಗಾಗಬಹುದು ನಿಮ್ಮ ಸಾಮಾಜಿಕ ಜೀವನವನ್ನು ನಿರ್ಲಕ್ಷಿಸಬೇಡಿ.

# ನೀರಿರುವಾಗಲೇ ಕಾಲುವೆ ಕಾಮಗಾರಿ: 2 ಕೋಟಿ ಅನುದಾನ ಯಾರ ಹಿತಕ್ಕಾಗಿ..!

## ಬೇಸಿಗೆಯಲ್ಲಿ ಮಾಡದ ನಿರ್ವಹಣೆ ಈಗೇಕೆ ರೈತರ ಬದುಕಿನೊಂದಿಗೆ ಅಧಿಕಾರಿಗಳ ಆಟವೇ

• ಇಲಿಯಾಸ್ ಪಟೇಲ್, ಬಳಗಾನೂರ ರಾಜ್ಯ ವಿಶೇಷ ವರದಿಗಾರರು

• **ಉದಯವಾಹಿನಿ, ಯಾದಗಿರಿ:** ನಾರಾಯಣಪುರ ಎಡದಂಡೆ ಕಾಲುವೆ ವ್ಯಾಪ್ತಿಯಲ್ಲಿ ನೀರು ಹರಿಯುತ್ತಿರುವ ಮಧ್ಯದಲ್ಲೇ ಕಾಲುವೆ ನವೀಕರಣ ಕಾಮಗಾರಿ ಆರಂಭಿಸಲು ಕೆಬಿಜೆಎನ್‌ಎಲ್ ಮುಂದಾಗಿರುವುದು ರೈತ ಸಮುದಾಯದಲ್ಲಿ ತೀವ್ರ ಅಸಮಾಧಾನಕ್ಕೆ ಕಾರಣವಾಗಿದೆ. ಬೇಸಿಗೆ ಅವಧಿಯಲ್ಲಿ ಪೂರ್ಣಗೊಳ್ಳಬೇಕಿದ್ದ ಸೀಲ್ಟ್ ತೆರವು, ಜಂಗಲ್ ಕಟಿಂಗ್ ಹಾಗೂ ಕಾಲುವೆ ದುರಸ್ತಿ ಕಾಮಗಾರಿ ವಿಳಂಬಗೊಂಡು, ಇದೀಗ ನೀರಾವರಿ ಹಂಗಾಮಿನಲ್ಲೇ ಟೆಂಡರ್ ಪ್ರಕ್ರಿಯೆ ಚುರುಕುಗೊಂಡಿರುವುದು ಆಡಳಿತದ ಕಾರ್ಯವೈಖರಿಯ ಬಗ್ಗೆ ಗಂಭೀರ ಪ್ರಶ್ನೆಗಳನ್ನು ಎಬ್ಬಿಸಿದೆ.

ರೈತರ ಪ್ರಕಾರ, ಅನೇಕ ವಿತರಕ ಕಾಲುವೆಗಳು ಇನ್ನೂ ಸೀಲ್ಟ್, ದಟ್ಟ ಮುಳ್ಳುಕಂಟಿಗಳು ಹಾಗೂ ಕಾಡು ಗಿಡಗಳಿಂದ ಮುಚ್ಚಿಕೊಂಡಿದ್ದು, ನೀರಿನ ಹರಿವಿಗೆ ಅಡ್ಡಿಯಾಗುತ್ತಿದೆ. ಪರಿಣಾಮವಾಗಿ ಹಲವೆಡೆ ರೈತರು ತಮ್ಮ ಸ್ವಂತ ಹಣ ಖರ್ಚು ಮಾಡಿ ಕಾಲುವೆಗಳನ್ನು ಸ್ವಚ್ಛಗೊಳಿಸಿ ಬೆಳೆಗಳಿಗೆ ನೀರು ತಲುಪಿಸುವ ಪರಿಸ್ಥಿತಿ ನಿರ್ಮಾಣವಾಗಿದೆ. ಸರ್ಕಾರದ ಅನುದಾನವಿದ್ದರೂ ರೈತರೇ ನಿರ್ವಹಣೆಯ ಹೊಣೆ ಹೊರುವಂತಾಗಿದೆ ಎಂಬ ಆರೋಪ ಕೇಳಿಬರುತ್ತಿದೆ.

ಕಾಲುವೆ ನಿರ್ವಹಣೆಗಾಗಿ ಸರ್ಕಾರದಿಂದ 2 ಕೋಟಿಗೂ ಅಧಿಕ ಅನುದಾನ ಬಿಡುಗಡೆಯಾಗಿರುವ ಮಾಹಿತಿ ಲಭ್ಯವಾಗಿದೆ. ಆದರೆ ಆ ಅನುದಾನವನ್ನು ಯಾವ ಕಾಮಗಾರಿಗೆ, ಯಾವ ಹಂತದಲ್ಲಿ ಹಾಗೂ ಯಾವ ಮಾನದಂಡದಂತೆ ಬಳಸಲಾಗುತ್ತಿದೆ ಎಂಬ ಕುರಿತು ಪಾರದರ್ಶಕ ಮಾಹಿತಿ ಸಾರ್ವಜನಿಕರಿಗೆ ಲಭ್ಯವಾಗಬೇಕಿದೆ ಎಂದು ರೈತರು ಒತ್ತಾಯಿಸಿದ್ದಾರೆ. ವಿಶೇಷವಾಗಿ ಕೆಂಭಾವಿ ಕೆಬಿಜೆಎನ್‌ಎಲ್ ವಿಭಾಗದ ಡಿವಿಜನ್1, ಡಿವಿಜನ್2 ಹಾಗೂ ಡಿವಿಜನ್21 ವ್ಯಾಪ್ತಿಯ ಹಲವೆಡೆ ನಿರ್ವಹಣಾ ಕೊರತೆ ಕಂಡುಬರುತ್ತಿದೆ ಎಂದು ಸ್ಥಳೀಯರು ಹೇಳುತ್ತಿದ್ದಾರೆ.

ನೀರಾವರಿ ನಡೆಯುತ್ತಿರುವ ಸಂದರ್ಭದಲ್ಲೇ ಕಾಮಗಾರಿ ಆರಂಭಿಸಿದರೆ ನೀರಿನ ಹರಿವಿಗೆ ಅಡ್ಡಿ ಉಂಟಾಗಿ ಬೆಳೆಗಳಿಗೆ ಹಾನಿಯಾಗುವ ಸಾಧ್ಯತೆ ಇದೆ ಎಂಬ ಆತಂಕವೂ ವ್ಯಕ್ತವಾಗಿದೆ. ರೈತರ ಜೀವನಾಧಾರವಾಗಿರುವ ನೀರಾವರಿ ವ್ಯವಸ್ಥೆಯಲ್ಲಿ ನಿರ್ಲಕ್ಷ್ಯಕ್ಕೆ ಅವಕಾಶವಿಲ್ಲ. ಬೇಸಿಗೆಯಲ್ಲಿ ಯೋಜಿತವಾಗಿ ಪೂರ್ಣಗೊಳ್ಳಬೇಕಿದ್ದ ಕಾಮಗಾರಿ ವಿಳಂಬವಾಗಿ ಈಗ ಕೈಗೆತ್ತಿಕೊಳ್ಳುತ್ತಿರುವುದು ಅಧಿಕಾರಿಗಳ ಯೋಜನಾ ಕೊರತೆಯೇ ಎಂಬ ಪ್ರಶ್ನೆ ಸಾರ್ವಜನಿಕ ವಲಯದಲ್ಲಿ ಕೇಳಿಬರುತ್ತಿದೆ.

ರೈತರ ಹಿತಾಸಕ್ತಿಗೆ ವಿರುದ್ಧವಾಗಿ ಯಾವುದೇ ಕ್ರಮ ಕೈಗೊಳ್ಳದೇ, ಕಾಮಗಾರಿಗಳ ಕುರಿತು ಸಂಪೂರ್ಣ ಪಾರದರ್ಶಕತೆ ಪಾಲಿಸಬೇಕು. ಅನುದಾನದ ಬಳಕೆ, ಟೆಂಡರ್ ಪ್ರಕ್ರಿಯೆ ಹಾಗೂ ಕಾಮಗಾರಿಗಳ ಗುಣಮಟ್ಟದ ಬಗ್ಗೆ ಸಂಬಂಧಪಟ್ಟ ಅಧಿಕಾರಿಗಳು ಸ್ಪಷ್ಟನೆ ನೀಡಬೇಕು ಎಂದು ರೈತರು ಆಗ್ರಹಿಸಿದ್ದಾರೆ. ಇಲ್ಲದಿದ್ದರೆ ರೈತ ಸಂಘಟನೆಗಳು ಹೋರಾಟದ ಎಚ್ಚರಿಕೆ ನೀಡಿವೆ.



ಉದಯವಾಹಿನಿ ಚಿತ್ರ

**ಉದಯ ವಾಹಿನಿ ಹೈಲೈಟ್ಸ್**

1. ನೀರು ಹರಿಯುತ್ತಿರುವ ಸಂದರ್ಭದಲ್ಲೇ ಕಾಲುವೆ ಕಾಮಗಾರಿ ಆರಂಭದ ಸಿದ್ಧತೆ.
2. ಬೇಸಿಗೆಯಲ್ಲಿ ಆಗದ ಸೀಲ್ಟ್, ಜಂಗಲ್ ಹಾಗೂ ಮುಳ್ಳುಕಂಟಿಗಳ ತೆರವು.
3. 2 ಕೋಟಿಗೂ ಅಧಿಕ ಅನುದಾನದ ಬಳಕೆಯ ಬಗ್ಗೆ ಪ್ರಶ್ನೆಗಳು.
4. ರೈತರು ಸ್ವಂತ ವೆಚ್ಚದಲ್ಲಿ ಕಾಲುವೆ ಸ್ವಚ್ಛಗೊಳಿಸಿದ ಆರೋಪ.
5. ಕೆಂಭಾವಿ ವಿಭಾಗದ ಡಿವಿಜನ್1, 2 ಹಾಗೂ 21 ವ್ಯಾಪ್ತಿಯಲ್ಲಿ ನಿರ್ವಹಣೆಯ ಕೊರತೆ ಬಗ್ಗೆ ಅಸಮಾಧಾನ.
6. ಕಾಮಗಾರಿ ಮತ್ತು ಅನುದಾನ ಬಳಕೆಯಲ್ಲಿ ಸಂಪೂರ್ಣ. ಪಾರದರ್ಶಕತೆಗಾಗಿ ರೈತರ ಒತ್ತಾಯ.

**ನೀರಾವರಿ ವ್ಯವಸ್ಥೆಯಲ್ಲಿ ನಿರ್ಲಕ್ಷ್ಯಕ್ಕೆ ಅವಕಾಶವಿಲ್ಲ.**

> ರೈತರ ಹಿತಕ್ಕಾಗಿ ಬಿಡುಗಡೆಯಾಗುವ ಸಾರ್ವಜನಿಕ ಹಣದ ಪ್ರತಿಯೊಂದು ರೂಪಾಯಿಯೂ ಉದ್ದೇಶಪೂರ್ವಕವಾಗಿ ಹಾಗೂ ಪಾರದರ್ಶಕವಾಗಿ ಬಳಸಬೇಕು. ನೀರು ಹರಿಯುತ್ತಿರುವ ವೇಳೆಯಲ್ಲಿ ಕಾಮಗಾರಿ ನಡೆಸುವುದು ರೈತರ ಬೆಳೆಗಳೊಂದಿಗೆ ಆಟವಾಡಿದಂತಾಗುತ್ತದೆ. ಇಂತಹ ನಿರ್ಧಾರಗಳಿಂದ ಬೆಳೆಗಳಿಗೆ ಹಾನಿಯಾದರೆ ಅದರ ಸಂಪೂರ್ಣ ಹೊಣೆ ಸಂಬಂಧಪಟ್ಟ ಅಧಿಕಾರಿಗಳ ಮೇಲಿದೆ. ಈ ಹಂಗಾಮಿನಲ್ಲಿ ಅವಸರದ ಕಾಮಗಾರಿ ನಡೆಸುವ ಬದಲು ಯೋಜಿತವಾಗಿ ಮುಂದಿನ ಬೇಸಿಗೆಯಲ್ಲಿ ನಿರ್ವಹಣೆ ಕೈಗೊಳ್ಳಬೇಕು. ಇಲ್ಲದಿದ್ದರೆ ರೈತ ಸಂಘಟನೆಗಳು ಹೋರಾಟವನ್ನು ತೀವ್ರಗೊಳಿಸಲು ಹಿಂದೆ ಸರಿಯುವುದಿಲ್ಲ.
> -ಎಚ್. ಆರ್. ಬಡಿಗೇರ
> ರಾಜ್ಯ ಕಾರ್ಯದರ್ಶಿ, ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ

# ಧಾರವಾಡ ಜಿಲ್ಲೆಯಲ್ಲಿ ಬಿಜೆಪಿಯಿಂದ ಬರ ಅಧ್ಯಯನ; ರೈತರಿಗೆ ಪ್ರತಿ ಎಕರೆಗೆ 50 ಸಾವಿರ ಪರಿಹಾರಕ್ಕೆ ಆಗ್ರಹ

• **ಉದಯವಾಹಿನಿ, ಹುಬ್ಬಳ್ಳಿ:** ರಾಜ್ಯದಲ್ಲಿ ತೀವ್ರ ಬರ ಪರಿಸ್ಥಿತಿ ತಲೆದೋರಿರುವ ಹಿನ್ನೆಲೆಯಲ್ಲಿ, ಬಿಜೆಪಿ ವತಿಯಿಂದ ರಚಿಸಲಾದ ಬರ ಅಧ್ಯಯನ ತಂಡವು ಬುಧವಾರ ಧಾರವಾಡ ಜಿಲ್ಲೆಗೆ ಭೇಟಿ ನೀಡಿ ರೈತರ ಸಂಕಷ್ಟಗಳನ್ನು ಖುದ್ದು ಪರಿಶೀಲಿಸಿತು.

ವಿಧಾನಪರಿಷತ್ ಸದಸ್ಯ ಎನ್. ರವಿಕುಮಾರ್ ನೇತೃತ್ವದ ತಂಡವು ಕುಂದಗೋಳ ತಾಲೂಕಿನ ಗುಡೇನಕಟ್ಟಿ ಗ್ರಾಮದ ಹೊರ ವಲಯದಲ್ಲಿರುವ ಜಮೀನುಗಳಿಗೆ ಭೇಟಿ ನೀಡಿತು. ಮಳೆಯ ಕೊರತೆಯಿಂದಾಗಿ ಸಂಪೂರ್ಣ ಒಣಗಿ ಹೋಗಿರುವ ಹೆಸರು ಬೆಳೆಗಳನ್ನು ವೀಕ್ಷಿಸಿದ ತಂಡವು, ಸ್ಥಳೀಯ ರೈತರು ಎದುರಿಸುತ್ತಿರುವ ತೀವ್ರ ಸಮಸ್ಯೆಗಳನ್ನು ಆಲಿಸಿತು. ಹೊಲದಲ್ಲಿ ನೆಲಬಿದ್ದು ಮೊಳಕೆಯೊಡೆದ ಬೆಳೆಗಳನ್ನು ಪರಿಶೀಲಿಸಿದ ರವಿಕುಮಾರ್, ಬರಗಾಲದ ತೀವ್ರ ಪರಿಣಾಮಗಳ ಕುರಿತು ರೈತರಿಂದ ಮಾಹಿತಿ ಪಡೆದರು.

ಇದೇ ವೇಳೆ ಸ್ಥಳದಲ್ಲಿದ್ದ ತಹಶೀಲ್ದಾರರು ಹಾಗೂ ಕೃಷಿ ಇಲಾಖೆಯ ಅಧಿಕಾರಿಗಳಿಂದ ಬೆಳೆ ಹಾನಿ, ಮಳೆ ಕೊರತೆ ಮತ್ತು ಸರ್ಕಾರ ವತಿಯಿಂದ ಕೈಗೊಳ್ಳಲಾಗಿರುವ ಪರಿಹಾರ ಕ್ರಮಗಳ ಕುರಿತು ವಿವರ ಪಡೆದುಕೊಂಡರು.


ಉದಯವಾಹಿನಿ ಚಿತ್ರ

**50,000 ಪರಿಹಾರಕ್ಕೆ ಆಗ್ರಹ:** ಬರದಿಂದ ಸಂಕಷ್ಟಕ್ಕೊಳಗಾಗಿರುವ ಉತ್ತರ ಕರ್ನಾಟಕದ ರೈತರಿಗೆ ಸರ್ಕಾರ ತಕ್ಷಣವೇ ಎಕರೆಗೆ 50,000 ಪರಿಹಾರ ಘೋಷಿಸಬೇಕು. ಬೆಳೆ ಹಾನಿಯ ಸಮೀಕ್ಷೆಯನ್ನು ಪಾರದರ್ಶಕವಾಗಿ ನಡೆಸಿ, ಅರ್ಹ ರೈತರಿಗೆ ಸೂಕ್ತ ಪರಿಹಾರ ಒದಗಿಸಬೇಕು ಎಂದು ಎನ್. ರವಿಕುಮಾರ್ ಈ ಸಂದರ್ಭದಲ್ಲಿ ಸರ್ಕಾರವನ್ನು ಬಲವಾಗಿ ಆಗ್ರಹಿಸಿದರು.

**ರಾಜ್ಯ ಸರ್ಕಾರದ ವಿರುದ್ಧ ಆಕ್ರೋಶ:** ಬಳಿಕ ಸರ್ಕಾರದ ವಿರುದ್ಧ ತೀವ್ರ ವಾಗ್ದಾಳಿ ನಡೆಸಿದ ರವಿಕುಮಾರ್, ರಾಜ್ಯ ಸರ್ಕಾರದ ವಿಫಲ ನೀತಿಗಳಿಂದಾಗಿ ಮತ್ತು ಕಾರಣಗಳಿಂದಲೇ ಸರ್ಕಾರವು ಸರಿಯಾಗಿ ಬರ ಸಮೀಕ್ಷೆ ನಡೆಸುತ್ತಿಲ್ಲ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಈ ಬರ ಅಧ್ಯಯನ ಪ್ರವಾಸದಲ್ಲಿ ಪ್ರಮುಖ ನಾಯಕರಾದ ಎ. ಎಸ್. ಪಾಟೀಲ ನಡಹಳ್ಳಿ, ಶಾಸಕ ಮಹೇಶ ಟೆಂಗಿನಕಾಯಿ, ಎಂ. ಆರ್. ಪಾಟೀಲ, ಲಿಂಗರಾಜ ಪಾಟೀಲ, ಶಂಕರ ಪಾಟೀಲ ಮುನೇನಕೊಪ್ಪ ಸೇರಿದಂತೆ ಪಕ್ಷದ ಪ್ರಮುಖರು ಹಾಗೂ ಸ್ಥಳೀಯ ಮುಖಂಡರಾದ ಬಿಜೆಪಿ ಗ್ರಾಮಾಂತರ ಅಧ್ಯಕ್ಷ ನಿಂಗಪ್ಪ ಸುತಗಟ್ಟಿ, ದಾನಪ್ಪ ಗಂಗಾಯಿ, ಸಂತೋಷ ಜೀವನಗೌಡರ, ಷಣ್ಮುಖ ಐಹೊಳೆ, ಸಿದ್ದನಗೌಡರ ಇನ್ನಿತರರು ಉಪಸ್ಥಿತರಿದ್ದರು.

# ದತ್ತಪೀಠ ಮಾರ್ಗದಲ್ಲಿ ಗುಡ್ಡ ಕುಸಿತ: ಉಕ್ಕಿ ಹರಿಯುತ್ತಿರುವ ತುಂಗಾ ನದಿ

• **ಉದಯವಾಹಿನಿ, ಚಿಕ್ಕಮಗಳೂರು:** ಕಾಫಿನಾಡು, ಮಲೆನಾಡು ಭಾಗದಲ್ಲಿ ಸುರಿಯುತ್ತಿರುವ ಭಾರಿ ಮಳೆ ಜಿಲ್ಲೆಯಾದ್ಯಂತ ಜನ ಜೀವನವನ್ನು ಅಸ್ತವ್ಯಸ್ತಗೊಳಿಸಿದೆ. ವಿಶೇಷವಾಗಿ ಶೃಂಗೇರಿ, ಚಿಕ್ಕಮಗಳೂರು ಹಾಗೂ ಪಶ್ಚಿಮ ಘಟ್ಟಗಳ ತಪ್ಪಲು ಪ್ರದೇಶಗಳಲ್ಲಿ ಮಳೆಯ ಅಬ್ಬರ ದಿನದಿಂದ ದಿನಕ್ಕೆ ಹೆಚ್ಚುತ್ತಿದ್ದು, ನದಿಗಳ ನೀರಿನ ಮಟ್ಟ ಏರಿಕೆ, ಗುಡ್ಡ ಕುಸಿತ ಹಾಗೂ ರಸ್ತೆ ಸಂಚಾರ ವ್ಯತ್ಯಯದಂತಹ ಘಟನೆಗಳು ಆತಂಕ ಮೂಡಿಸಿವೆ.

ಶೃಂಗೇರಿ ತಾಲ್ಲೂಕಿನಾದ್ಯಂತ ಬೆಳಿಗ್ಗೆಯಿಂದಲೇ ಧಾರಾಕಾರ ಮಳೆಯಾಗಿದ್ದು, ತುಂಗಾ ನದಿ ಅಪಾಯದ ಮಟ್ಟದಲ್ಲಿ ಹರಿಯುತ್ತಿದೆ. ನದಿಯ ನೀರಿನ ಮಟ್ಟ ಕ್ಷಣಕ್ಷಣಕ್ಕೂ ಏರಿಕೆಯಾಗುತ್ತಿರುವ ಹಿನ್ನೆಲೆಯಲ್ಲಿ ಪ್ರವಾಹ ಭೀತಿ ಎದುರಾಗಿದೆ. ಶೃಂಗೇರಿ ಪಟ್ಟಣದ ಕೆಇಬಿ ವೃತ್ತದ ಆಟೋ ನಿಲ್ದಾಣ, ಪ್ಯಾರಲಲ್ ರಸ್ತೆಗಳು ಸೇರಿದಂತೆ ಹಲವು ತಗ್ಗು ಪ್ರದೇಶಗಳು ಜಲಾವೃತಗೊಂಡಿವೆ.


ಉದಯವಾಹಿನಿ ಚಿತ್ರ

ಕೆರೆಕಟ್ಟೆ ಭಾಗದಲ್ಲಿಯೂ ಭಾರಿ ಮಳೆಯಾಗಿದ್ದು, ಪಟ್ಟಣದ ಹಲವು ರಸ್ತೆಗಳ ಮೇಲೆ ನೀರು ಹರಿದ ಪರಿಣಾಮ ವಾಹನ ಸಂಚಾರಕ್ಕೆ ಅಡಚಣೆ ಉಂಟಾಯಿತು. ನದಿ ಪಾತ್ರದ ನಿವಾಸಿಗಳು ಮುನ್ನೆಚ್ಚರಿಕೆ ವಹಿಸುವಂತೆ ಅಧಿಕಾರಿಗಳು ಸೂಚನೆ ನೀಡಿದ್ದಾರೆ.

ಇನ್ನೊಂದೆಡೆ, ಚಿಕ್ಕಮಗಳೂರು ತಾಲ್ಲೂಕಿನ ಶಂಕರ್ ಫಾಲ್ಸ್ ಸಮೀಪ ಭಾರೀ ಗಾಳಿಗೆ ಬೃಹತ್ ಮರ ರಸ್ತೆ ಮೇಲೆ ಉರುಳಿಬಿದ್ದ ಪರಿಣಾಮ ಚಿಕ್ಕಮಗಳೂರು, ಶೃಂಗೇರಿ ರಾಜ್ಯ ಹೆದ್ದಾರಿಯಲ್ಲಿ ಒಂದು ಗಂಟೆಗೂ ಹೆಚ್ಚು ಕಾಲ ಸಂಚಾರ ಸಂಪೂರ್ಣ ಸ್ಥಗಿತಗೊಂಡಿತ್ತು.

ರಸ್ತೆಯ ಎರಡೂ ಬದಿಗಳಲ್ಲೂ ಕಿಲೋ ಮೀಟರ್‌ಗಟ್ಟಲೆ ವಾಹನಗಳು ಸಾಲುಗಟ್ಟಿ ನಿಂತಿದ್ದವು. ಮಳೆ ನಡುವೆಯೇ ಸ್ಥಳೀಯರು ಹಾಗೂ ಅಧಿಕಾರಿಗಳು ಜಂಟಿಯಾಗಿ ಮರವನ್ನು ತೆರವುಗೊಳಿಸಿ ವಾಹನ ಸಂಚಾರವನ್ನು ಪುನಃ ಆರಂಭಿಸಿದರು.

ಜಿಲ್ಲೆಯ ಪಶ್ಚಿಮ ಘಟ್ಟಗಳ ತಪ್ಪಲು ಪ್ರದೇಶದಲ್ಲಿಯೂ ನಿರಂತರ ಮಳೆಯ ಪರಿಣಾಮ ಭೂಮಿಯ ತೇವಾಂಶ ಹೆಚ್ಚಾಗಿ ಗುಡ್ಡ ಕುಸಿತಗಳು ಸಂಭವಿಸುತ್ತಿವೆ. ಮುಳ್ಳಯ್ಯನಗಿರಿ ತಪ್ಪಲಿನ ದತ್ತಪೀಠ ಮಾರ್ಗದ ಕವಿಕಲ್ ಗಂಡಿ ಬಳಿ ಕಾಂಕ್ರೀಟ್ ತಡೆಗೋಡೆ ನಿರ್ಮಾಣವಾಗುತ್ತಿದ್ದ ಸ್ಥಳದಲ್ಲೇ ಗುಡ್ಡ ಕುಸಿದಿದ್ದು, ರಸ್ತೆಗೆ ಮಣ್ಣು ಬಿದ್ದ ಪರಿಣಾಮ ಕೆಲಕಾಲ ಸಂಚಾರಕ್ಕೆ ಅಡಚಣೆ ಉಂಟಾಯಿತು. ಅಧಿಕಾರಿಗಳು ಜೆಸಿಬಿ ಯಂತ್ರಗಳ ಸಹಾಯದಿಂದ ಮಣ್ಣನ್ನು ತೆರವುಗೊಳಿಸಿ ವಾಹನ ಸಂಚಾರಕ್ಕೆ ಅನುವು ಮಾಡಿಕೊಟ್ಟರು.

# ನವೀನ ತಂತ್ರಜ್ಞಾನ ಅಳವಡಿಸಿ ಕೊಳ್ಳಲು ಸಲಹೆ

• **ಉದಯವಾಹಿನಿ, ಜೇವರ್ಗಿ :** ಅಧ್ಯಾಪಕರು ತಮ್ಮ ವೃತ್ತಿಯಲ್ಲಿ ಬೋಧನಾ ಕೌಶಲ್ಯವನ್ನು ಸುಧಾರಿಸಿಕೊಳ್ಳಲು ನವೀನ ತಂತ್ರಜ್ಞಾನ ಬಳಸಿಕೊಂಡು ವೃತ್ತಿಪರ ನಡವಳಿಕೆ ಹಾಗೂ ಆತ್ಮವಿಶ್ವಾಸವನ್ನು ಹೆಚ್ಚಿಸಿಕೊಳ್ಳಬೇಕು ಎಂದು ಗುಲಬರ್ಗಾ ವಿಶ್ವವಿದ್ಯಾಲಯದ ಗ್ರಂಥಪಾಲಕರು, ಆಂತರಿಕ ಗುಣಮಟ್ಟ ಭರವಸೆ ಕೋಶದ ಸಂಯೋಜಕರಾದ ಡಾ. ಸುರೇಶ ಜಂಗೆ ಹೇಳಿದರು.


ಉದಯವಾಹಿನಿ ಚಿತ್ರ

ಅವರು ಪಟ್ಟಣದ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಆಂತರಿಕ ಗುಣಮಟ್ಟ ಭರವಸೆ ಕೋಶ ಅಡಿಯಲ್ಲಿ "ಆಕಾಡೆಮಿ ಉತ್ಕೃಷ್ಟತೆಗಾಗಿ ಸಾಮರ್ಥ್ಯ ನಿರ್ಮಾಣ" ಶಿರ್ಷಿಕೆಯಲ್ಲಿ ಆಯೋಜಿಸಿದ್ದ ಪ್ರಾಧ್ಯಾಪಕರಿಗಾಗಿ ಒಂದು ವಾರದ 'ಅಧ್ಯಾಪಕರ ಅಭಿವೃದ್ಧಿ ಕಾರ್ಯಕ್ರಮ'ವನ್ನು ಉದ್ಘಾಟಿಸಿ, 'ಕಾರ್ಯಕ್ಷಮತೆ ಆಧಾರಿತ ಸ್ವಯಂ ಮೌಲ್ಯ ಮಾಪನ ವರದಿ ತಯಾರಿಕೆ' ವಿಷಯದ ಕುರಿತು ಮಾತನಾಡಿದರು.

ಅಧ್ಯಕ್ಷತೆವಹಿಸಿದ್ದ ಪ್ರಾಂಶುಪಾಲೆ ಡಾ.ಶಾಂತಾ ಅಸ್ಟಿಗೆ ಮಾತನಾಡುತ್ತ, ಅಧ್ಯಾಪಕರು ಉತ್ತಮ ವೃತ್ತಿ ಕೌಶಲ್ಯಗಳನ್ನು ಬೆಳೆಸಿಕೊಳ್ಳಬೇಕು ಮತ್ತು ಸಂಶೋಧನಾ ಮನೋಭಾವ ರೂಢಿಸಿಕೊಳ್ಳಲು ತಿಳಿಸಿದರು.

# ಅನಿಲ ಸ್ಫೋಟ: ಮೂವರ ದುರ್ಮರಣ, ನಾಲ್ವರ ಸ್ಥಿತಿ ಗಂಭೀರ

• **ಉದಯವಾಹಿನಿ,ಯಾದಗಿರಿ** ಜಿಲ್ಲೆಯ ಗುರುಮಠಕಲ್ ತಾಲ್ಲೂಕಿನ ಕಡೇಚೂರು ಸಮೀಪದ ಬಾಡಿಯಾಳ ಕೈಗಾರಿಕಾ ಪ್ರದೇಶದಲ್ಲಿರುವ ಸೀಲ್ ಲ್ಯಾಬೋರೇಟರಿ ಕಂಪನಿಯಲ್ಲಿ ಸಂಭವಿಸಿದ ಭೀಕರ ಗ್ಯಾಸ್ ಸ್ಫೋಟದಲ್ಲಿ ಮೂವರು ಕಾರ್ಮಿಕರು ಮೃತಪಟ್ಟಿದ್ದು, ನಾಲ್ವರು ಗಂಭೀರವಾಗಿ ಗಾಯಗೊಂಡಿರುವ ಘಟನೆ ನಡೆದಿದೆ.

ಕಂಪನಿಯೊಳಗೆ ಕೆಲಸ ನಡೆಯುತ್ತಿದ್ದ ವೇಳೆ ಏಕಾಏಕಿ ಗ್ಯಾಸ್ ಸ್ಫೋಟ ಸಂಭವಿಸಿದ್ದು, ಸ್ಫೋಟದ ತೀವ್ರತೆಗೆ ಕಾರ್ಮಿಕರು ಗಂಭೀರವಾಗಿ ಗಾಯಗೊಂಡಿದ್ದಾರೆ. ಒಟ್ಟು ಏಳು ಕಾರ್ಮಿಕರು ದುರಂತಕ್ಕೆ ಒಳಗಾಗಿದ್ದು, ಅವರಲ್ಲಿ ಮೂವರು ಸ್ಥಳದಲ್ಲೇ ಅಥವಾ ಚಿಕಿತ್ಸೆ ಫಲಕಾರಿಯಾಗದೆ ಮೃತಪಟ್ಟಿದ್ದಾರೆ ಎಂದು ಪ್ರಾಥಮಿಕ ಮಾಹಿತಿ ತಿಳಿಸಿದೆ. ಮೃತಪಟ್ಟ ಮೂವರು ಕಾರ್ಮಿಕರೂ ಬಿಹಾರ ಮೂಲದವರಾಗಿದ್ದಾರೆ ಎಂದು ತಿಳಿದುಬಂದಿದೆ. ಗಾಯಗೊಂಡಿರುವ ನಾಲ್ವರನ್ನು ತಕ್ಷಣವೇ ರಾಯಚೂರಿನ ರಿಮ್ಸ್ ಆಸ್ಪತ್ರೆಗೆ ದಾಖಲಿಸಲಾಗಿದ್ದು, ಅವರ ಆರೋಗ್ಯ ಸ್ಥಿತಿ ಗಂಭೀರವಾಗಿದೆ ಎಂದು ವೈದ್ಯಕೀಯ ಮೂಲಗಳು ತಿಳಿಸಿವೆ. ಘಟನೆ ಕುರಿತು ಮಾಹಿತಿ ತಿಳಿಯುತ್ತಿದ್ದಂತೆ ಪೊಲೀಸರು ಹಾಗೂ ಸಂಬಂಧಿತ ಅಧಿಕಾರಿಗಳು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ. ಸ್ಫೋಟಕ್ಕೆ ನಿಖರ ಕಾರಣ ಏನು ಎಂಬುದರ ಕುರಿತು ತನಿಖೆ ಆರಂಭಿಸಲಾಗಿದ್ದು, ಈ ಘಟನೆ ಸೈದಾಪುರ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ನಡೆದಿದೆ.

# ಸರ್ಕಾರಿ ಶಾಲೆ, ಅಂಗನವಾಡಿಗಳಿಂದ ಕಳ್ಳತನ 9 ಲಕ್ಷಕ್ಕೂ ಅಧಿಕ ಮೌಲ್ಯದ ವಸ್ತು ಸೇರಿ 55 ಗ್ಯಾಸ್ ಸಿಲಿಂಡರ್ ಜಪ್ತಿ

• **ಉದಯವಾಹಿನಿ, ಬೀದರ್:** ಸರ್ಕಾರಿ ಶಾಲೆ, ಅಂಗನವಾಡಿಗಳಿಂದ ಕಳ್ಳತನ ಮಾಡಿ ಅಕ್ರಮವಾಗಿ ಮಾರಾಟ ಮಾಡುತ್ತಿದ್ದ 55 ಗ್ಯಾಸ್ ಸಿಲಿಂಡರ್ ಸೇರಿ 9 ಲಕ್ಷ ರೂ.ಗೂ ಅಧಿಕ ಮೌಲ್ಯದ ವಸ್ತುಗಳನ್ನು ಬೀದರ್ ಪೊಲೀಸರು ಜಪ್ತಿ ಮಾಡಿದ್ದಾರೆ.ಸರ್ಕಾರಿ ಶಾಲೆ, ಅಂಗನವಾಡಿ ಹಾಗೂ ವಿವಿಧ ಕಡೆಗಳಿಂದ ಸಿಲಿಂಡರ್‌ಗಳನ್ನು ಕಳ್ಳತನ ಮಾಡಿ, ಬೀದರ್‌ನಿಂದ ಮಹಾರಾಷ್ಟ್ರದ ಉದ್ಗೀರ್‌ಗೆ ಅಕ್ರಮವಾಗಿ ಸಾಗಾಟ ಮಾಡಲಾಗ್ತಿತ್ತು. ಈ ವೇಳೆ ದಾಳಿ ನಡೆಸಿದ ಪೊಲೀಸರು 55 ಸಿಲಿಂಡರ್ ಗಳನ್ನು ಜಪ್ತಿ ಮಾಡಲಾಗಿದೆ. ಈ ಸಂಬಂಧ ಮೇಹಕರ್, ಭಾಲ್ಕಿ ಗ್ರಾಮೀಣ, ಖಟಕ್ ಚಿಂಚೋಳಿ ಪೊಲೀಸ್ ಠಾಣೆ ಸೇರಿದಂತೆ ಹಲವು ಠಾಣೆಗಳಲ್ಲಿ 9 ಪ್ರಕರಣ ದಾಖಲಾಗಿವೆ. ಇದೇ ವೇಳೆ ಕೃತ್ಯಕ್ಕೆ ಬಳಸಿದ್ದ ಕಾರು ಸೇರಿದಂತೆ ಒಟ್ಟು 9 ಲಕ್ಷಕ್ಕೂ ಅಧಿಕ ಮೌಲ್ಯದ ಸಿಲಿಂಡರ್‌ಗಳನ್ನು ಜಪ್ತಿ ಮಾಡಲಾಗಿದೆ. ಎಸ್ಪಿ ಪ್ರದೀಪ್ ಗುಂಟಿ ನೇತೃತ್ವದಲ್ಲಿ ಬೀದರ್ ಪೊಲೀಸರು ಭರ್ಜರಿ ಕಾರ್ಯಾಚರಣೆ ನಡೆಸಿ 9 ಪ್ರಕರಣಗಳಲ್ಲಿ ನಾಲ್ಕು ಜನ ಆರೋಪಿಗಳನ್ನು ಬಂಧಿಸಿ ನ್ಯಾಯಾಂಗ ಬಂಧನಕ್ಕೆ ನೀಡಲಾಗಿದೆ.

# ಕಾಲೇಜು ವಿದ್ಯಾರ್ಥಿಗಳ ಮೇಲೆ ರ್‍ಯಾಗಿಂಗ್ ಶಂಕೆ

• **ಉದಯವಾಹಿನಿ, ಮಂಗಳೂರು:** ನಗರದ ಕಾಲೇಜಿನ ಪ್ರಥಮ ವರ್ಷದ ಇಬ್ಬರು ವಿದ್ಯಾರ್ಥಿಗಳ ಮೇಲೆ ಹಿರಿಯ ವಿದ್ಯಾರ್ಥಿಗಳು ಹಲ್ಲೆ ನಡೆಸಿರುವ ಘಟನೆ ಗುಜ್ಜರಕೆರೆ ಬಳಿ ಮಂಗಳವಾರ ನಡೆದಿದೆ. ಘಟನೆಯಲ್ಲಿ ಗಾಯಗೊಂಡ ವಿದ್ಯಾರ್ಥಿಗಳನ್ನು ನಗರದ ಹೈಲ್ಯಾಂಡ್ ಆಸ್ಪತ್ರೆಗೆ ದಾಖಲಿಸಲಾಗಿದ್ದು, ಮೇಲ್ನೋಟಕ್ಕೆ ಇದೊಂದು ರ್‍ಯಾಗಿಂಗ್ ಪ್ರಕರಣದಂತೆ ಕಂಡುಬರುತ್ತಿದೆ ಎಂದು ಮಂಗಳೂರು ನಗರ ಪೊಲೀಸ್ ಕಮಿಷನರ್ ಸುಧೀರ್ ಕುಮಾರ್ ರೆಡ್ಡಿ ಸ್ಪಷ್ಟಪಡಿಸಿದ್ದಾರೆ.

**ಗುಜ್ಜರಕೆರೆ ಚಹಾ ಅಂಗಡಿ ಬಳಿ ನಡೆದ ಧಾಂದಲೆ:** ಕಾಲೇಜಿನ ಪ್ರಥಮ ವರ್ಷದಲ್ಲಿ ವ್ಯಾಸಂಗ ಮಾಡುತ್ತಿರುವ ಇಬ್ಬರು ವಿದ್ಯಾರ್ಥಿಗಳ ಮೇಲೆ, ದ್ವಿತೀಯ ವರ್ಷದ ಸುಮಾರು 4 ರಿಂದ 6 ಮಂದಿ ಹಿರಿಯ ವಿದ್ಯಾರ್ಥಿಗಳು ಗುಜ್ಜರಕೆರೆಯ ಚಹಾ ಅಂಗಡಿಯೊಂದರ ಬಳಿ ಏಕಾಏಕಿ ಹಲ್ಲೆ ನಡೆಸಿದ್ದಾರೆ . ಹಲ್ಲೆಯಿಂದ ಗಾಯಗೊಂಡ ವಿದ್ಯಾರ್ಥಿಗಳನ್ನು ತಕ್ಷಣವೇ ಹೈಲ್ಯಾಂಡ್ ಆಸ್ಪತ್ರೆಗೆ ದಾಖಲಿಸಿ ಚಿಕಿತ್ಸೆ ನೀಡಲಾಗುತ್ತಿದೆ.

**ಮಂಗಳೂರು ನಗರ ಪೊಲೀಸ್ ಕಮಿಷನರ್ ಸುಧೀರ್ ಕುಮಾರ್ ರೆಡ್ಡಿ ಪ್ರತಿಕ್ರಿಯೆ:** ಘಟನೆ ಸಂಬಂಧ ಪ್ರತಿಕ್ರಿಯಿಸಿರುವ ನಗರ ಪೊಲೀಸ್ ಕಮಿಷನರ್ ಸುಧೀರ್ ಕುಮಾರ್ ರೆಡ್ಡಿ ಅವರು, ಗುಜ್ಜರಕೆರೆ ಚಹಾ ಅಂಗಡಿ ಬಳಿ ಪ್ರಥಮ ವರ್ಷದ ಇಬ್ಬರು ವಿದ್ಯಾರ್ಥಿಗಳ ಮೇಲೆ 2ನೇ ವರ್ಷದ 4 ರಿಂದ 6 ವಿದ್ಯಾರ್ಥಿಗಳು ಹಲ್ಲೆ ನಡೆಸಿರುವುದು ವರದಿಯಾಗಿದೆ.

# ಹುಡುಗಿ ಕಾಟದಿಂದ ತಪ್ಪಿಸಿಕೊಳ್ಳೋಕೆ ರಾಯರ ಮೊರೆ ವಿಚಿತ್ರ ಹರಕೆ ಪತ್ರ

• **ಉದಯವಾಹಿನಿ, ಬೆಳಗಾವಿ:** ಹುಡುಗಿ ಕಾಟದಿಂದ ತಪ್ಪಿಸಿಕೊಳ್ಳಲು ಭಕ್ತರೊಬ್ಬರು ರಾಯರಿಗೆ ಮೊರೆ ಇಟ್ಟಿರುವ ವಿಚಿತ್ರ ಹರಕೆ ಘಟನೆ ಜಿಲ್ಲೆಯ ರಾಮದುರ್ಗ ಪಟ್ಟಣದ ಶ್ರೀ ರಾಘವೇಂದ್ರ ಸ್ವಾಮಿ ಮಠದಲ್ಲಿ ಬೆಳಕಿಗೆ ಬಂದಿದೆ. ಇತ್ತೀಚೆಗೆ ರಾಘವೇಂದ್ರ ಮಠದಲ್ಲಿ ಹುಂಡಿ ಎಣಿಕೆ ಮಾಡುವ ಸಂದರ್ಭದಲ್ಲಿ ಈ ವಿಚಿತ್ರ ಹರಕೆ ಪತ್ರ ಪತ್ತೆಯಾಗಿದೆ. ರಾಯರೇ ಆ ಹುಡುಗಿಯಿಂದ ನಮ್ಮನ್ನು ಕಾಪಾಡು ಎಂದು ಭಕ್ತನೋರ್ವ ಪತ್ರ ಬರೆದು ಹುಂಡಿಯಲ್ಲಿ ಹಾಕಿದ್ದಾರೆ. ಆರಂಭದಲ್ಲಿ ಶ್ರೀ ಗಣಪತಿಯೇ ನಮಃ ಹಾಗೂ ಓಂ ಶ್ರೀ ರಾಘವೇಂದ್ರಾಯ ನಮಃ ಎಂದು ಬರೆಯಲಾಗಿದೆ. ಮುಂದುವರೆದು, ರಾಯರೇ ನಮ್ಮನ್ನು ಆ ವಿಷದಿಂದ ಕಾಪಾಡು, ರಾಯರೇ ಆ ಹುಡುಗಿಯಿಂದ ನಮ್ಮನ್ನು ಕಾಪಾಡು, ರಾಯರೇ ಈ ಕಷ್ಟದಿಂದ ನಮ್ಮನ್ನು ಕಾಪಾಡು. ನಮ್ಮ ಜೊತೆ ರಾಯರಿದ್ದಾರೆ. ಹೀಗಾಗಿ ಅವರಲ್ಲಿ ನನ್ನ ಕಷ್ಟವನ್ನು ಕೇಳಿಕೊಳ್ಳುತ್ತಿದ್ದೇನೆ, ಗುರುಗಳೇ ಆದಿಶಕ್ತಿ ದೇವಿ, ತಂದೆ, ತಾಯಿ ಕಾಪಾಡು ಎಂದು ಕೇಳಿಕೊಂಡು ಕೊನೆಗೆ ಧನ್ಯವಾದಗಳು ಎಂದು ಬರೆಯಲಾಗಿದೆ.


ಉದಯವಾಹಿನಿ ಚಿತ್ರ

ಈ ಪತ್ರ ಬರೆದಿರುವ ವ್ಯಕ್ತಿಯ ಹೆಸರು, ವಿಳಾಸ ಸೇರಿದಂತೆ ಯಾವುದೇ ಮಾಹಿತಿ ಪತ್ರದಲ್ಲಿ ಉಲ್ಲೇಖವಾಗಿಲ್ಲ. ಅನಾಮಧೇಯ ಭಕ್ತನ ಈ ಅಪರೂಪದ ಮನವಿ ಪತ್ರ ಮಠದ ಸಿಬ್ಬಂದಿ ಹಾಗೂ ಭಕ್ತರನ್ನು ಚಕಿತಗೊಳಿಸಿದೆ. ಅಷ್ಟೇ ಅಲ್ಲದೇ, ಇದು ಸಾಮಾಜಿಕ ಜಾಲತಾಣಗಳಲ್ಲೂ ತೀವ್ರ ಚರ್ಚೆಗೆ ಗ್ರಾಸವಾಗಿದೆ

# ನಿವೇಶನ ರಹಿತರಿಗೆ ನಿವೇಶನ ನೀಡಲು-ಕರವೇ ಸ್ವಾಭಿಮಾನಿ ಸೇನೆ ಆಗ್ರಹ

• **ಉದಯವಾಹಿನಿ, ಹೊಸಪೇಟೆ :** ತಾಲ್ಲೂಕಿನಲ್ಲಿ ಕಡು ಬಡವರು ಹಾಗೂ ನಿವೇಶನ ರಹಿತರಿಗೆ ನಿವೇಶನ ಹಂಚಿಕೆ ಮಾಡುವಂತೆ ಕರ್ನಾಟಕ ರಕ್ಷಣಾ ವೇದಿಕೆಯ ಸ್ವಾಭಿಮಾನಿ ಸೇನೆ ಒತ್ತಾಯಿಸಿದೆ.


ಉದಯವಾಹಿನಿ ಚಿತ್ರ

ಈ ಕುರಿತು ಮಂಗಳವಾರ ಕರ್ನಾಟಕ ರಕ್ಷಣಾ ವೇದಿಕೆ ಸ್ವಾಭಿಮಾನಿ ಸೇನೆ ಜಿಲ್ಲಾ ಘಟಕದ ನೇತೃತ್ವದಲ್ಲಿ ಜಿಲ್ಲಾಧಿಕಾರಿಗಳ ಕಛೇರಿ ಎದುರು ಪ್ರತಿಭಟನೆ ನಡೆಸಿದ, ಸ್ವಾಭಿಮಾನಿ ಸೇನೆ ಕಾರ್ಯಕರ್ತರು ನಂತರ ಜಿಲ್ಲಾಧಿಕಾರಿ ಕವಿತಾ ಎಸ್.ಮನ್ನಿಕೇರಿ ಅವರಿಗೆ ಮನವಿ ಸಲ್ಲಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಕರವೇ ಸ್ವಾಭಿಮಾನಿ ಸೇನೆ ಜಿಲ್ಲಾಧ್ಯಕ್ಷ ತಾರಿಹಳ್ಳಿ ಹನುಮಂತಪ್ಪ, ಸರ್ಕಾರ ನಿವೇಶನ ರಹಿತರಿಗೆ ನಿವೇಶನ ನೀಡುವ ಕುರಿತಂತೆ ಕಳೆದ ವರ್ಷವೇ ಸಾರ್ವಜನಿಕರಿಂದ ಆನ್ಲೈನ್ ಮೂಲಕ ಅರ್ಜಿ ಆಹ್ವಾನ ಮಾಡಿದೆ. ಸಾಕಷ್ಟು ಬಡವರು ಹಾಗೂ ನಿವೇಶನ ರಹಿತರು ಅರ್ಜಿ ಹಾಕಿದ್ದಾರೆ.

ಆದರೆ ಈವರೆಗೆ ಅರ್ಜಿ ಹಾಕಿದ ಫಲಾನುಭವಿಗಳಿಗೆ ನಿವೇಶನ ಹಂಚಿಕೆ ಮಾಡಿಲ್ಲ. ಈ ಹಿನ್ನಲೆಯಲ್ಲಿ ಶಾಸಕರ ನೇತೃತ್ವದಲ್ಲಿ ಸಮಿತಿ ರಚಿಸಿ, ಶೀಘ್ರವೇ ಅರ್ಜಿ ಹಾಕಿದ ಫಲಾನುಭವಿಗಳಿಗೆ ನಿವೇಶನ ವಿತರಿಸುವಂತೆ ನಿವೇಶನ ಹಂಚಿಕೆ ಸಂದರ್ಭದಲ್ಲಿ ಯಾವುದೇ ಒತ್ತಡಕ್ಕೆ ಮಣಿಯದಿರುವಂತೆ ಮನವಿ ಪತ್ರದಲ್ಲಿ ಒತ್ತಾಯಿಸಲಾಗಿದೆ.

**ಸರ್ಕಾರಿ ಜಮೀನು ಕಬಳಿಕೆ:** ನಗರದಲ್ಲಿ ಸರ್ಕಾರಿ ಜಮೀನನ್ನು ನಕಲಿ ದಾಖಲೆಗಳನ್ನು ಸೃಷ್ಟಿಸಿ, ಕಬಳಿಕೆ ಮಾಡುವ ಪ್ರಕರಣಗಳು ಹೆಚ್ಚಾಗಿ ನಡೆಯುತ್ತಿದ್ದು. ಇದಕ್ಕೆ ಕಡಿವಾಣ ಹಾಕುವಂತೆ ಕರವೇ ಸ್ವಾಭಿಮಾನಿ ಸೇನೆ ಕಾರ್ಯಕರ್ತರು ಇದೇ ಸಂದರ್ಭದಲ್ಲಿ ಜಿಲ್ಲಾಧಿಕಾರಿಗಳನ್ನು ಒತ್ತಾಯಿಸಿದರು.

# ಕನಿಷ್ಠ ವೇತನ ಜಾರಿಗೆ ಆಗ್ರಹಿಸಿ ವಸತಿ ಶಾಲಾ ನೌಕರರ ಪ್ರತಿಭಟನೆ

## ರಾಜ್ಯ ಸರ್ಕಾರವು ಕಾರ್ಮಿಕ ಇಲಾಖೆ ಮುಖಾಂತರ ಅಂತಿಮ ಅಧಿಸೂಚನೆ ಪ್ರಕಟಿಸಿ, ದಿ.22-05-2026 ರಿಂದ ಹೊಸ ಕನಿಷ್ಠ ವೇತನ ಜಾರಿಗೆ ಆದೇಶ ಮಾಡಿದೆ

• **ಉದಯವಾಹಿನಿ, ಹೊಸಪೇಟೆ.** ರಾಜ್ಯ ಸರ್ಕಾರದ ಕಾರ್ಮಿಕ ಇಲಾಖೆ ಹೊರಡಿಸಿರುವ ಅಂತಿಮ ಅಧಿಸೂಚನೆ ಪ್ರಕಾರ ಕನಿಷ್ಠ ವೇತನ ಜಾರಿ ಮಾಡುವಂತೆ ಒತ್ತಾಯಿಸಿ, ಕರ್ನಾಟಕ ರಾಜ್ಯ ಸರ್ಕಾರಿ ಹಾಸ್ಟೆಲ್ ಮತ್ತು ವಸತಿ ಶಾಲಾ ಹೊರಗುತ್ತಿಗೆ ನೌಕರರ ಸಂಘದ ಜಿಲ್ಲಾ ಸಮಿತಿ ನೇತೃತ್ವದಲ್ಲಿ ಹೊರ ಗುತ್ತಿಗೆ ನೌಕರರು ಜಿಲ್ಲಾಧಿಕಾರಿಗಳ ಕಛೇರಿ ಎದುರು ಬೃಹತ್ ಪ್ರತಿಭಟನೆ ನಡೆಸಿದರು.

ಈ ಸಂದರ್ಭದಲ್ಲಿ ಪ್ರತಿಭಟನಾಕಾರರನ್ನುದ್ದೇಶಿಸಿ

1 : ಹೊಸ ಕನಿಷ್ಠ ವೇತನ ಜಾರಿಗೆ
2 : ಸಂಬಳ ಪಾವತಿಸಲು ಸೂಚನೆ
3 : ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ

ಮಾತನಾಡಿದ ವಸತಿ ಶಾಲಾ ಹೊರ ಗುತ್ತಿಗೆ ನೌಕರರ ಸಂಘದ ಜಿಲ್ಲಾಧ್ಯಕ್ಷ ಮರಡಿ ಜಂಬಯ್ಯ ನಾಯಕ, ರಾಜ್ಯ ಸರ್ಕಾರವು ಕಾರ್ಮಿಕ ಇಲಾಖೆ ಮುಖಾಂತರ ಅಂತಿಮ ಅಧಿಸೂಚನೆ ಪ್ರಕಟಿಸಿ, ದಿ.22-05-2026 ರಿಂದ ಹೊಸ ಕನಿಷ್ಠ ವೇತನ ಜಾರಿಗೆ ಆದೇಶ ಮಾಡಿದೆ.

ಹೊಸಪೇಟೆ ಉಪವಿಭಾಗದ ಕಾರ್ಮಿಕ ಅಧಿಕಾರಿಗಳು, ಜಿಲ್ಲಾ ಮಟ್ಟದ ಎಲ್ಲಾ ಇಲಾಖೆ ಅಧಿಕಾರಿಗಳಿಗೆ ಪತ್ರ ಬರೆದು ಕನಿಷ್ಠ ವೇತನ ಜಾರಿಗೆ ತಿಳಿಸಿದ್ದಾರೆ.ಈ ಹಿನ್ನಲೆಯಲ್ಲಿ ಜಿಲ್ಲಾಧಿಕಾರಿಗಳು ಜಿಲ್ಲಾ ಹಾಗೂ ತಾಲ್ಲೂಕು ಮಟ್ಟದ ಅಧಿಕಾರಿಗಳು ಹಾಗೂ ನೌಕರರ ಸಂಘದ ಪ್ರತಿನಿಧಿಗಳ ಜಂಟಿ ಸಭೆ ನಡೆಸಿ, ಕನಿಷ್ಠ ವೇತನ ಜಾರಿಗೆ ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದರು.

**ಹೊರ ಗುತ್ತಿಗೆ ನೌಕರರಿಗೆ ಕೂಡಲೇ ಕನಿಷ್ಠ ವೇತನ ನೀಡಿ**


ಉದಯವಾಹಿನಿ ಚಿತ್ರ

> ಅದರಂತೆ ಸಮಾಜ ಕಲ್ಯಾಣ ಇಲಾಖೆ, ಹಿಂದುಳಿದ ವರ್ಗಗಳ ಇಲಾಖೆ, ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಜಿಲ್ಲಾ ಮಟ್ಟದ ಅಧಿಕಾರಿಗಳು, ತಾಲೂಕು ಮಟ್ಟದ ಅಧಿಕಾರಿಗಳಿಗೆ ಕಾರ್ಮಿಕ ಇಲಾಖೆಯ ಅಧಿಸೂಚನೆ ಅನ್ವಯ ಕನಿಷ್ಠ ವೇತನ ನಿಗಧಿಪಡಿಸಿ, ಹೊರ ಗುತ್ತಿಗೆ ನೌಕರರ ಸಂಬಳ ಪಾವತಿಸಲು ಸೂಚನೆ ನೀಡಿದ್ದಾರೆ. -ದಲಿತ ಹಕ್ಕುಗಳ ಸಮಿತಿ ಜಿಲ್ಲಾ ಉಪಾಧ್ಯಕ್ಷ ಬಿ.ತಾಯಪ್ಪ ನಾಯಕ

ದಲಿತ ಹಕ್ಕುಗಳ ಸಮಿತಿ ಜಿಲ್ಲಾ ಉಪಾಧ್ಯಕ್ಷ ಬಿ.ತಾಯಪ್ಪ ನಾಯಕ ಮಾತನಾಡಿ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ, ಕ್ರೈಸ್ತ ಮೊರಾರ್ಜಿ ವಸತಿ ಶಾಲೆಗಳು ಮತ್ತು ಹಂಪಿ ಕವಿವಿಯಲ್ಲಿ ಕೆಲಸ ಮಾಡುತ್ತಿರುವ ಹೊರ ಗುತ್ತಿಗೆ ನೌಕರರಿಗೆ ಕೂಡಲೇ ಕನಿಷ್ಠ ವೇತನ ನೀಡಬೇಕು. ಹೊರ ಗುತ್ತಿಗೆ ನೌಕರರಿಗೆ ಹೊರ ಗುತ್ತಿಗೆ ಸಂಪನ್ಮೂಲ ಏಜೆನ್ಸಿಗಳಿಂದ ನೇಮಕಾತಿ ಆದೇಶ, ಸರ್ವೀಸ್ ಸರ್ಟಿಫಿಕೇಟ್, ಸಮವಸ್ತ್ರ ಸೇರಿದಂತೆ ಅಗತ್ಯ ಸೌಕರ್ಯಗಳನ್ನು ಒದಗಿಸಬೇಕು. ಕಳೆದ 20 ವರ್ಷಗಳಿಂದ ದಿನಗೂಲಿ ಹಾಗೂ ಹೊರ ಗುತ್ತಿಗೆ ನೌಕರರಾಗಿ ಕೆಲಸ ಮಾಡುತ್ತಿರುವ ನೌಕರರನ್ನು ಖಾಯಂ ಮಾಡಬೇಕು. ಇಲ್ಲವೇ ವಯೋ ನಿವೃತ್ತಿವರೆಗೆ ಸೇವಾ ಭದ್ರತೆ ನೀಡಬೇಕು.

ವಾರಕ್ಕೊಮ್ಮೆ ರಜೆ ಮಂಜೂರು ಮಾಡಬೇಕು ಎಂದು ಒತ್ತಾಯಿಸಿದರು.ನಂತರ ವಿವಿಧ ಬೇಡಿಕೆಗಳ ಮನವಿ ಪತ್ರವನ್ನು ಜಿಲ್ಲಾಧಿಕಾರಿ ಕವಿತಾ ಎಸ್.ಮನ್ನಿಕೇರಿ ಅವರಿಗೆ ಸಲ್ಲಿಸಿದರು. ಪ್ರತಿಭಟನೆಯಲ್ಲಿ ಸಂಘದ ಜಿಲ್ಲಾ ಕಾರ್ಯದರ್ಶಿ ಬಿ.ರಮೇಶ್ ಕುಮಾರ್, ಸಂಘಟನಾ ಕಾರ್ಯದರ್ಶಿ ನಾಗೂ ನಾಯ್ಕ್, ಮುಖಂಡರಾದ ತಿಮ್ಮಪ್ಪ, ಎಂ.ಚಂದ್ರಶೇಖರ್, ಪರಸಪ್ಪ, ದುರುಗೇಶ್. ಶಿವಪ್ಪ, ರಮೇಶ್, ರಾಘವೇಂದ್ರ, ಪವಿತ್ರ, ಪ್ರೇಮ, ಕಾಳಮ್ಮ, ಸೀತಮ್ಮ, ಅಂಬಿಕಾ, ಸರೋಜ, ರಾಧಾ, ತಾಯಮ್ಮ, ಹುಲಿಗೆಮ್ಮ, ರಾಮಕ್ಕ ಸೇರಿದಂತೆ ಹೊರ ಗುತ್ತಿಗೆ ನೌಕರರು ಭಾಗವಹಿಸಿದ್ದರು.

**ನೌಕರರು ಆತಂಕ**

ಜಿಲ್ಲೆಯ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ಹಾಗೂ ಕ್ರೈಸ್ತ ವಸತಿ ಶಾಲೆಗಳಲ್ಲಿ ಮತ್ತು ಹಂಪಿ ಕನ್ನಡ ವಿಶ್ವವಿದ್ಯಾಲಯದಲ್ಲಿ ಮೇ ತಿಂಗಳ 10 ದಿನ ಮತ್ತು ಜೂನ್, ಜುಲೈ ವೇತನವನ್ನು ಹೊಸದಾಗಿ ಜಾರಿಯಾಗಿರುವ ಕನಿಷ್ಠ ವೇತನ ಪ್ರಕಾರ ಪಾವತಿ ಮಾಡದೆ ಇರುವುದರಿಂದ ನೌಕರರು ಆತಂಕಕ್ಕೆ ಒಳಗಾಗಿದ್ದಾರೆ.